

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ
Editor : MARUTI BASAVANTAPPA HOSAMANI
Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ
ಬಾಗಲಕೋಟೆಯಿಂದ ಪ್ರಕಟಿತ
RNI REG No. : KARKAN/2016/75068

SIHI KAHI
KANNADA DAILY MORNING
BAGALKOT

Volume : 06 Issue : 300 Friday 19-04-2024 E-mail : maruti.b.hosamani76@gmail.com Page: 4 Price : Rs. 1/-


## ನೀರಿಗಾಗಿ ತಹಶೀಲ್ದಾರರ ಕಛೇರಿ ಮುಂದೆ ಪ್ರತಿಭಟನೆ



**ಬಿ.ಬಿ ಇಂಗಳಗಿ :** ದೇವರ ಹಿಪ್ಪರಗಿ ತಾಲ್ಲೂಕಿನ ಕೊಂಡಗೂಳಿ ಗ್ರಾಮ ಪಂಚಾಯತಿ ವಾಪ್ತಿಯಲ್ಲಿ ಬರುವ ಬಿಬಿ ಇಂಗಳಗಿ ಗ್ರಾಮದಲ್ಲಿ ಬಹು ದಿನಗಳಿಂದ ನೀರಿನ ಸಮಸ್ಯೆ ಇದೇ ಈ ಗ್ರಾಮಕ್ಕೆ ಯಾವ ಅಧಿಕಾರಿ ಆಗಲಿ ಈ ಕಡೆಗೆ ಗಮನ ಹರಿಸಿಲ್ಲ ಹಲವಾರು ಬಾರಿ ಗ್ರಾಮ ಪಂಚಾಯತಿಗೆ ಹಾಗೂ ತಾಲ್ಲೂಕು ಪಂಚಾಯತಿಗೆ, ತಹಶಿಲ್ದಾರರ ಕಛೇರಿಗೆ ಊರಿನ ಗ್ರಾಮಸ್ಥರ ರಿಂದ ಮನವಿ ಸಲ್ಲಿಸಿದೇವೆ ಅದರೂ ಯಾರೂ ನಮ್ಮ ಸಮಸ್ಯೆಯನ್ನು ಬಗೆಹರಿಸಿಲ್ಲಾ, ಇಂದು ಗ್ರಾಮಸ್ಥರು ಕೂಡಿ ತಹಶಿಲ್ದಾರರ ಕಛೇರಿ ಮುಂದೆ ಕಾಲಿ ಕೊಡ ತೆಗೆದುಕೊಂಡು ಹೋರಾಟ ಮಾಡಿದರು, ಗ್ರಾಮಕ್ಕೆ ಹತ್ತು ಇಪ್ಪತ್ತು ದಿನಕ್ಕೆ ಒಮ್ಮೆ ನೀರು ಬರುತ್ತವೆ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಜಾನುವಾರುಗಳಿಗೆ ಕುಡಿಯಲು ನೀರು ಇಲ್ಲಾ ಹಲವಾರು ಬಾರಿ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಮನವಿ ಮಾಡಿದ್ದೇವೆ ಗ್ರಾಮ ಪಂಚಾಯತಿ ಅಧ್ಯಕ್ಷರು ಹಾಗೂ ಅಭಿವೃದ್ಧಿ ಅಧಿಕಾರಿಗಳು ಹಾಗೂ ಸದಸ್ಯರು ನೀರಿನ ಸಮಸ್ಯೆ ಬಗೆಹರಿಸಿಲ್ಲಾ, ಅದಕ್ಕಾಗಿ ಇಂದು ತಹಶಿಲ್ದಾರರ ಸಾಹೇಬರಿಗೆ ಬೇಟೆ ಮಾಡಿದ ತಕ್ಷಣ,ತಹಶಿಲ್ದಾರರಾದ ಪ್ರಕಾಶ ಸಿಂದಗಿ ಹಾಗೂ ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳಾದ ಸಂಜೀವ ಜನ್ನೊರ ಅವರು ಗ್ರಾಮಕ್ಕೆ ಭೇಟಿ ನೀಡಿ ಇನ್ನೂ ಒಂದು ವಾರದಲ್ಲಿ ನೀರಿನ ಸಮಸ್ಯೆ ಬಗೆಹರಿಸುತ್ತೇವೆ ಎಂದು ಹೇಳಿದರು ಕೂಡಲೆ ಗ್ರಾಮಸ್ಥರು ತಮ್ಮ ಹೋರಾಟವನ್ನು ಹಿಂಪಡೆದರು ಈ ಹೋರಾಟ ನೇತೃತ್ವವಹಿಸಿದ ಸಲೀಮ ವಠಾರ ಅವರು ನೀರಿನ ಸಮಸ್ಯೆ ಬಗ್ಗೆ ಸವಿಸ್ತಾರವಾಗಿ ಮಾತನಾಡಿದರು, ಪಾತೀಮಾ ಬಾಗಲಕೋಟ, ಮಡಿವಾಳಮ್ಮ ಅಗಸರ ಇವರು ಮಾತನಾಡಿದರು, ಈ ಸಂದರ್ಭದಲ್ಲಿ ಅಬ್ಬಾಸಾಲಿ ಬಾಗಲಕೋಟ ಹುಸೇನಸಾಬ ನಧಾಪ ಇಮಾಮಸಾಬ ನಧಾಪ ಬಂದಗಿಸಾಬ ನಾಶಿ ಗುರುಸಿದ್ದಯ್ಯ ಹಿರೇಮಠ ನಬಿಸಾಬ ಬಾಗಲಕೋಟ ಸಹಿನಬಾನು ಬಾಗಲಕೋಟ ಶೇಹಜಾದಬಿ ಆಹೇರಿ ಲಾಲಬಿ ನಧಾಪ ಹಜರತಬಿ ನಧಾಪ ಇಂದ್ರಾಬಾಯಿ ಅಗಸರ ಹುಸೇನಬಿ ಶೇಖ ಸಹಿರಾಬಿಬೇಗಂ ನಧಾಪ ಇಮಾಮಬಿ ನಧಾಪ ಆಯಿಶಂ ಆಹೇರಿ ರೊಶನಬಿ ಆಹೇರಿ ಶಾರದಾ ಶರಣಮ್ಮ ಕದ್ದನಳ್ಳಿ ಹಲಿಮಾ ವಠಾರ ಸಕೀಲಾಬಾನು ಮುಜಾವಾರ ಪರವೀನ ಬಾಗಲಕೋಟ ಮಾದೇವಿ ಮಲ್ಲೇದ ಜಯಶ್ರೀ ಮಲ್ಲೇದ ಕಾಸುಬಿ ವಠಾರ ಈ ಹೋರಾಟದಲ್ಲಿ ಭಾಗವಹಿಸಿದ್ದರು.

**ತಾಲೂಕ ವರದಿಗಾರರು ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಭೀಮಪ್ಪ ಹಚ್ಯಾಳ ದೇವರ ಹಿಪ್ಪರಗಿ**

## ವ್ಯಕ್ತಿಗಿಂತ ಪಕ್ಷ ಮೊದಲು: ಕೋಟಾ ಶ್ರೀನಿವಾಸ್ ಪೂಜಾರಿ




**ತರೀಕೆರೆ :** ಜನರ ಭಾವನೆಗಳನ್ನು ತಿಳಿದುಕೊಂಡು ನರೇಂದ್ರ ಮೋದಿ ರವರಿಗೆ ಬೆಂಬಲಿಸಬೇಕಾಗಿದೆ ಎಂದು ಉಡುಪಿ ಚಿಕ್ಕಮಗಳೂರು ಲೋಕಸಭಾ ಅಭ್ಯರ್ಥಿ ಕೋಟಾ ಶ್ರೀನಿವಾಸ್ ಪೂಜಾರಿ ಹೇಳಿದರು. ಅವರು ಇಂದು ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಏರ್ಪಡಿಸಿದ್ದ ಪ್ರಚಾರ ಸಭೆಯಲ್ಲಿ ಹೇಳಿದರು. ದೇಶಪ್ರೇಮಿಗಳು ಭಾರತ ಮಾತಾ ಕಿ ಜೈ ಎಂದರೆ ಕರ್ನಾಟಕ ವಿಧಾನಸೌಧದಲ್ಲಿ ಪಾಕಿಸ್ತಾನಕ್ಕೆ ಜೈ ಎನ್ನುವ ಕೂಗು ಕೇಳಬೇಕಾಗಿದೆ. ಇದು ನಮ್ಮ ದೌರ್ಭಾಗ್ಯ, ವ್ಯಕ್ತಿಗಿಂತ ಪಕ್ಷ ಮೊದಲು, ದೇಶ ಮೊದಲು, ರಾಜ್ಯದಲ್ಲಿ 10.5 ಲಕ್ಷ ಕುಟುಂಬಗಳಿಗೆ ಗೃಹಲಕ್ಷ್ಮಿ ಯೋಜನೆ ಕೊಟ್ಟಿಲ್ಲ. ಕಳೆದ ಆರು ತಿಂಗಳಿನಿಂದ ಅಂಗವಿಕಲರ ವೇತನ, ವಿಧವಾ ವೇತನ, ಸಂಧ್ಯಾ ಸುರಕ್ಷಾ ವೇತನ ಕೊಟ್ಟಿಲ್ಲ. ದೇಶ ಕಾಯ್ದ ನಿವೃತ್ತ ಸೈನಿಕ ಶ್ರೀನಿವಾಸ್ ರವರು ತಮ್ಮ ಒಂದು ತಿಂಗಳ ಪಿಂಚಣಿ 32 ಸಾವಿರ ರೂಗಳನ್ನು ಕೊಟ್ಟಿದ್ದಾರೆ. ಆದ್ದರಿಂದ ದೇಶ ರಕ್ಷಣೆಗಾಗಿ ಬಿಜೆಪಿಗೆ ಮತ ನೀಡಬೇಕು ಎಂದು ಹೇಳಿದರು. ಮಾಜಿ ಶಾಸಕ ಡಿ ಎಸ್ ಸುರೇಶ್ ಮಾತನಾಡಿ ಕೇಂದ್ರ ಸರ್ಕಾರದ ಅಮೃತ್ ಯೋಜನೆಯಿಂದ ಪ್ರತಿ ಮನೆಮನೆಗೂ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮಾಡಿದ್ದೇವೆ. ನಗರುತ್ತನ ಯೋಜನೆಯಲ್ಲಿ ರಸ್ತೆ ಹಾಗೂ ಹಲವಾರು ಅಭಿವೃದ್ಧಿ ಕಾಮಗಾರಿಗಳು ಇಂದಿಗೂ ನಡೆಯುತ್ತಿವೆ

ಅದು ಬಿಜೆಪಿ ಸರ್ಕಾರದಿಂದ ಆಗಿರುವ ಕಾಮಗಾರಿಗಳು. ನಾವೆಲ್ಲರೂ ನೆಮ್ಮದಿ ಜೀವನ ಮಾಡಲು ನರೇಂದ್ರ ಮೋದಿ ರವರು ಮತ್ತೊಮ್ಮೆ ಪ್ರಧಾನ ಮಂತ್ರಿ ಆಗಬೇಕು ಎಂದು ಹೇಳಿದರು. ಮಾಜಿ ಶಾಸಕ ಎಸ್ಎಂ ನಾಗರಾಜ್, ಅಜ್ಜಂಪುರದ ಎಂ ಕೃಷ್ಣಮೂರ್ತಿ, ಜೆಡಿಎಸ್ ತಾಲೂಕ್ ಅಧ್ಯಕ್ಷ ಎಂ ನರೇಂದ್ರ, ಪುರಸಭಾ ಸದಸ್ಯ ಟಿಎಂ ಭೋಜರಾಜ್ ಮಾತನಾಡಿದರು. ಕಾರ್ಯಕ್ರಮದಲ್ಲಿ ಮಂಡಲ ಅಧ್ಯಕ್ಷ ಪ್ರತಾಪ್, ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯರಾದ ಕೆಆರ್ ಧ್ರುವ ಕುಮಾರ್, ಎಸಿ ಚಂದ್ರಪ್ಪ, ಚೈತ್ರ ಶ್ರೀ ಮಾಲತೇಶ್, ರಾಜೇಶ್ವರಿ, ಆನಂದಪ್ಪ, ಬಿಜೆಪಿ ಜಿಲ್ಲಾ ಅಧ್ಯಕ್ಷ ದೇವರಾಜ ಶೆಟ್ಟಿ, ಕಲ್ಮರ್ಡಪ್ಪ , ನಗರ ಅಧ್ಯಕ್ಷ ರೇಣುಕಾ, ಶಿವಾನಂದ್, ಟಿ ಎಚ್ ಎಲ್ ರಮೇಶ್. ಮುಂತಾದವರು ಉಪಸ್ಥಿತರಿದ್ದರು.

**ಜಿಲ್ಲಾ ವರದಿಗಾರರು ಹಾಗೂ ಎಸ್. ಕೆ ನ್ಯೂಸ್ ಕನ್ನಡ ಚಾನಲ್: ಎನ್. ವೆಂಕಟೇಶ್. ತರೀಕೆರೆ.**

## ಬಾಗಲಕೋಟೆ ಲೋಕಸಭಾ ಕ್ಷೇತ್ರಕ್ಕೆ ನಾಲ್ಕು ಬಾರಿ ಆಯ್ಕೆಯಾಗಿರುವ ಸಂಸದ ಗದ್ದಿಗೌಡರ ಕೊಡುಗೆ ಶೂನ್ಯ: ಮುತ್ತಣ್ಣ ಮೇತ್ರಿ



**ಜಮಖಂಡಿ :** ಕಳೆದ ನಾಲ್ಕು ಬಾರಿ ಬಾಗಲಕೋಟೆ ಲೋಕಸಭಾ ಕ್ಷೇತ್ರ ದಿಂದ ಆಯ್ಕೆಯಾಗಿರುವ ಸಂಸದ ಪಿ.ಸಿ.ಗದ್ದಿಗೌಡರ ಇವರು 20 ವರ್ಷಗಳ ಕಾಲ ಕ್ಷೇತ್ರಕ್ಕೆ ಯಾವುದೇ ಕೆಲಸ ಮಾಡಿಲ್ಲ. ಸಂಸದರ ಕೊಡುಗೆ ಶೂನ್ಯ ಎಂದು ಜಿಲ್ಲಾ ದಲಿತ ಮುಖಂಡ ಮುತ್ತಣ್ಣ ಮೇತ್ರಿ ಆರೋಪಿಸಿದರು.

ಅವರು ಮಂಗಳವಾರ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿ ಸಂಸದ ಗದ್ದಿಗೌಡರ 20 ವರ್ಷಗಳಿಂದ ಯಾವುದೇ ಕೆಲಸ ಮಾಡಿಲ್ಲ. ಕ್ಷೇತ್ರದ ಪರ ಸದನದಲ್ಲಿ ಒಂದು ಬಾರಿವು ಧ್ವನಿ ಎತ್ತಿ ಮಾತನಾಡಿಲ್ಲ. ದಲಿತ ಹಿಂದುಳಿದ ವರ್ಗ, ಕಾರ್ಮಿಕರ, ರೈತರ ಬಳಿ ಹೋಗಿ ಸಮಸ್ಯೆ ಕೇಳಿಲ್ಲ. ಜನರ ಪರಿಸ್ಥಿತಿ ಆಲಿಸಿಲ್ಲ. ದಲಿತ, ಎಸ್.ಸಿ. ಗಳಿಗೆ ಸೌಲಭ್ಯಗಳನ್ನು ಬಂದ್ ಮಾಡಿರಿ ಎಂದು ಅನ್ನಾಸಾಹೇಬ ಜೊಲ್ಲೆ, ಸಿ.ಪಿ. ಯೋಗಿಶ್ವರ ಪತ್ರ ಬರೆದರು. ಬಿಜೆಪಿ ಸರಕಾರ ಎಸ್.ಸಿ / ಎಸ್.ಟಿ.ವಿದ್ಯಾರ್ಥಿ ವೇತನ,ಹಾಗೂ ಸಬ್ಸಿಡಿ ಬಂದ್ ಮಾಡಿದರು. ಕೇಂದ್ರದಲ್ಲಿ ಬಿಜೆಪಿ ಸರಕಾರ ಇದ್ದರೂ ಕೇಂದ್ರ ಸರಕಾರದ ಯೋಜನೆಗಳನ್ನು ಜಮಖಂಡಿ ತಾಲೂಕು ಮತ್ತು ಬಾಗಲಕೋಟೆ ಜಿಲ್ಲೆಗೆ ತರಬಹುದಾಗಿತ್ತು. ಆದರೂ ಏನೂ ತಂದಿಲ್ಲ. ಸಂಸತ್ತಿನಲ್ಲಿ ಒಂದು ದಿನವೂ ಬಾಗಲಕೋಟ ಜಿಲ್ಲೆಯ ಪರ ಧ್ವನಿ ಎತ್ತಲಿಲ್ಲ. ಬಿಜೆಪಿ ಪಕ್ಷದ ಪ್ರಣಾಳಿಕೆಯಲ್ಲಿ ಶೇ 75 ರಷ್ಟು ಸುಳ್ಳು ಇವೆ. ಬಾಗಲಕೋಟೆ ಜಿಲ್ಲೆಯ ಜನತೆ ಪ್ರಜ್ಞಾವಂತರಿದ್ದು ಈ ಬಾರಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ಶ್ರೀಮತಿ ಸಂಯುಕ್ತಾ ಪಾಟೀಲ್ ಅವರು 1 ಲಕ್ಷ ಮತಗಳ ಅಂತರದಿಂದ ಜಯಗಳಿಸುವರು ಎಂದು ವಿಶ್ವಾಸ ವ್ಯಕ್ತಪಡಿಸಿದರು. ಪತ್ರಿಕಾ ಗೋಷ್ಠಿಯಲ್ಲಿ ದಲಿತ ಮುಖಂಡರಾದ ಮುತ್ತಣ್ಣ ಮೇತ್ರಿ ದಾನೇಶ ಘಾಟಗೆ ಸಿದ್ದು ಮಾದರ ವಿಲಾಸ ನಡುವಿನಮನಿ ಗೋವಿಂದ ಗಸ್ತಿ ಮಾರುತಿ ಮರೆಗುದ್ದಿ ಸಂಜು ಪೂಜಾರಿ ಸೇರಿ ಸಂಯುಕ್ತಾ ಪಾಟೀಲ ಅವರ ಗೆಲುವು ನಿಶ್ಚಿತ ಎಂದು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಕರವೇಯಿಂದ ಡಾ. ಬಿ. ಆರ್. ಅಂಬೇಡ್ಕರ ಜಯಂತಿ ಆಚರಣೆ



**ಬಾಗಲಕೋಟೆ : ಹೆಚ್.ಶಿವರಾಮೇಗೌಡರ ಕರ್ನಾಟಕ ರಕ್ಷಣಾ ವೇದಿಕೆಯಿಂದ ಭಾರತರತ್ನ, ಸಂವಿಧಾನ ಶಿಲ್ಪಿ ಡಾ|| ಬಾಬಾಸಾಹೇಬ್ ಅಂಬೇಡ್ಕರವರ 133 ನೇಯ ಜನ್ಮದಿನವನ್ನು ರವಿವಾರ ನವನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಪ್ರತಿಮೆಗೆ ಪುಷ್ಪನಮನ ಸಲ್ಲಿಸಿ ಗೌರವ ಸೂಚಿಸಿ, ಜಯಘೋಷ ಹಾಕುವ ಮೂಲಕ ಡಾ,ಬಿ.ಆರ್. ಅಂಬೇಡ್ಕರರವರ ಜಯಂತಿಯನ್ನು ಆಚರಿಸಲಾಯಿತು.ಈ ಸಂದರ್ಭದಲ್ಲಿ ಕರವೇ ಜಿಲ್ಲಾ ಸಂಚಾಲಕ ನವೀನ್ ಕಪಾಲಿ, ಯುವ ಘಟಕದ ಜಿಲ್ಲಾಧ್ಯಕ್ಷ ರಾಘು ರಾಠೂಡ್, ಸಂಜೀವ್ ಕೋಲ್ಕಾರ, ಹರೀಶ್ ತೆಗ್ಗಿ, ಆಶಿಪ್ ಭಾಗವಾನ, ದಯಾನಂದ ಉತ್ತರಕರ,ಅರ್ಜುನ್ ಸಿಂಗ್ ರಜಪೂತ, ಸಿದ್ದು ಅಂಬಿಗೇರ, ಚೇತನ್ ಸೂಳಿಕೇರಿ, ಮಹೆಬೂಬ ಗುಲಾಬುರ್ಗಾ ಸೇರಿದಂತೆ ಇನ್ನಿತರ ಕರವೇ ಕಾರ್ಯಕರ್ತರು ಭಾಗವಹಿಸಿದ್ದರು.**

## ಬರ ಪರಿಹಾರ ನಿಧಿಯನ್ನು ಬಿಡುಗಡೆ ಮಾಡಲು ರಾಜ್ಯದ 27 ಸಂಸದರು ಪ್ರಧಾನಿಯವರಿಗೆ ಒತ್ತಾಯಿಸಲು ಆಗ್ರಹ



ಬಾಗಲಕೋಟ: ರಾಜ್ಯದಲ್ಲಿ ಭೀಕರ ಬರಗಾಲ ತಾಂಡವ ಆಡುತ್ತಿದೆ. ಹೊಳೆ ಹಳ್ಳಗಳು ಬತ್ತಿ ಹೋಗಿವೆ. ಕುಡಿಯುವ ನೀರಿಗೆ ಪ್ರಾಣಿಗಳು, ಪಕ್ಷಿಗಳು ಪಶುಗಳು, ಜನ, ಜಾನುವಾರಗಳು, ಜೀವ ಜಂತುಗಳು ತತ್ತರಿಸಿ ಹೋಗಿವೆ. ಗಿಡ ಮರಗಳು ಒಣಗಿ ಹೋಗಿವೆ.

ಇದನ್ನೆಲ್ಲ ಅರಿತಿರುವ ತಾವುಗಳು ಪ್ರಧಾನ ಮಂತ್ರಿ ನರೇಂದ್ರ. ಮೋದಿಯವರಿಗೆ ಒತ್ತಾಯಿಸಿ ಬರ ಪರಿಹಾರ ನಿಧಿಯನ್ನು ಬಿಡುಗಡೆ ಮಾಡಿಸಬೇಕೆಂದು ರಾಜ್ಯದ 27 ಭಾರತೀಯ ಜನತಾ ಪಕ್ಷದ ಸಂಸದರಿಗೆ ಸ್ಥಳೀಯ ನಗರ ಯೋಜನಾ ಪ್ರಾಧಿಕಾರದ ಮಾಜಿ ಸಭಾಪತಿ ಎ.ಎ.ದಂಡಿಯಾ ಆಗ್ರಹ ಪಡಿಸಿದ್ದಾರೆ.

ದೇಶದ ಸರ್ವೋಚ್ಚ ನ್ಯಾಯಾಲಯವು ಈಗಾಗಲೇ ಬರ ಪರಿಹಾರ ನಿಧಿಯನ್ನು ಬಿಡುಗಡೆ ಕುರಿತು ಕೇಂದ್ರ ಸರಕಾರಕ್ಕೆ ತರಾಟೆಗೆ ತೆಗೆದುಕೊಂಡಿದೆ. ಆ ಸಂದರ್ಭದಲ್ಲಿ ಕೇಂದ್ರ ಸರ್ಕಾರದ ಪರವಾಗಿ ಅಡ್ವೋಕೇಟ್ ಜನರಲ್ ಎರಡು ವಾರಗಳಲ್ಲಿ ಸಮಸ್ಯೆ ಪರಿಹರಿಸುವ ಭರವಸೆಯನ್ನು ನೀಡಿದ್ದಾರೆ. ಈಗ ನೀತಿ ಸಂಹಿತೆ ನೆಪದಲ್ಲಿ ಹಿಂದೇಟು ಹಾಕುತ್ತಿದೆ. ಕೂಡಲೇ ಪ್ರಧಾನಿ ನರೇಂದ್ರ ಮೋದಿಜೀ ಹಸ್ತಕ್ಷೇಪ ಮಾಡಿ ಪರಿಹಾರ ನಿಧಿಯನ್ನು ಬಿಡುಗಡೆ ಗೊಳಿಸಬೇಕು. ಕರ್ನಾಟಕವೂ ಭಾರತದಲ್ಲಿದೆ.

ನಮ್ಮ ದೇಶ ಒಕ್ಕೂಟ ವ್ಯವಸ್ಥೆಯನ್ನು ಹೊಂದಿದೆ. ರಾಜ್ಯ ಭೀಕರ ಬರಗಾಲದಿಂದ ತತ್ತರಿಸುತ್ತಿದೆ. ಈ ಕು– ರಿತು ಕೇಂದ್ರ ಬರಗಾಲ ಅಧ್ಯಯನ ತಂಡ ರಾಜ್ಯಕ್ಕೆ ಭೇಟಿ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಸಂಪೂರ್ಣ ಮಾಹಿತಿಯನ್ನು ಕೇಂದ್ರ ಸರಕಾರಕ್ಕೆ ನೀಡಿ ಮೂರು ತಿಂಗಳು ಕಳೆದರೂ ಅದರಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಕಂದಾಯ ಮಂತ್ರಿ ಕೃಷ್ಣಾ. ಬೈರೇಗೌಡ ಪ್ರಧಾನಿಯವರಿಗೆ ಭೇಟಿ ಮಾಡಿ ಮನವಿ ಮಾಡಿಕೊಂಡಿದ್ದಾರೆ. ಆದರೂ ಮೂಕ ಪ್ರೇಕ್ಷಕನಾಗಿರುವ ಪ್ರಧಾನಿ ಅವರ ನಿರ್ಲಕ್ಷ್ಯತನ ಒಕ್ಕೂಟ ವ್ಯವಸ್ಥೆಗೆ ಮಾರಕವಾಗಿದೆ ಅಂತಾ ದಂಡಿಂ–ಯಾ ಪತ್ರಿಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಬೇಡ್ಕರ ಪುತ್ಥಳಿಗೆ ಮಾಲಾರ್ಪಣೆ



ಬಾಗಲಕೋಟೆ: ಡಾ.ಬಿ.ಆರ. ಅಂಬೇಡ್ಕರ ಜಯಂತಿ ನಿಮಿತ್ಯ ನಗರದಲ್ಲಿರುವ ಅಂಬೇಡ್ಕರ ಪುತ್ಥಳಿಗೆ ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ನಗರಸಭೇ ಸದಸ್ಯೆ ಜ್ಯೋತಿ ಭಜಂತ್ರಿ, ಯಲ್ಲಪ್ಪ ಬೇಂಡಿಗೇರಿ,ಶಿವಾನಂದ ಟವಳಿ,ರಾಜು ನಾಯ್ಕರ,ಕೇಶವ ಭಜಂತ್ರಿ,ಬಸವರಾಜ ಹುನಗುಂದ ಸೇರಿದಂತೆ ಅನೇಕರು ಇದ್ದರು.

## ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ಕೊಡಿಸಿದ ಅಂಬೇಡ್ಕರ್



ರಬಕವಿ–ಬನಹಟ್ಟಿ; ವಿಶ್ವಕ್ಕೆ ಮಾದರಿಯಾದ ಸಂವಿಧಾನ ರಚನೆ ಮಾಡುವ ಮೂಲಕ ನಮ್ಮ ದೇಶದ ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಸಮಾನತೆಯನ್ನು ನೀಡಿದ ಮಹಾನ್ ವ್ಯಕ್ತಿ ಡಾ. ಬಿ. ಆರ್. ಅಂಬೇಡ್ಕರ್. ಅವರು ಸಮಾನತೆಯ ಹರಿಕಾರರಾಗಿದ್ದಾರೆ ಎಂದು ರಬಕವಿ ಬನಹಟ್ಟಿ ತಹಶೀಲ್ದಾರ್ ಗಿರೀಶ ಸ್ವಾದಿ ತಿಳಿಸಿದರು. ಭಾನುವಾರ ಇಲ್ಲಿನ ತಹಶೀಲ್ದಾರ್ ಕಾರ್ಯಾಲಯದಲ್ಲಿ ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರ 133 ನೇ ಜಯಂತ್ಯೋತ್ಸವದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಂಬೇಡ್ಕರ್ ತತ್ವ, ಚಿಂತನೆಗಳು ಸರ್ವ ಜನರಿಗೂ ಮತ್ತು ಸರ್ವ ಕಾಲಕ್ಕೂ ಪ್ರಸ್ತುತವಾಗಿವೆ. ಆದ್ದರಿಂದ ಪ್ರತಿಯೊಬ್ಬರು ಅಂಬೇಡ್ಕರ್ ಹಾಕಿ ಕೊಟ್ಟ ಮಾರ್ಗದರ್ಶನದಲ್ಲಿ ನಡೆದು ದೇಶದ ಸೇವೆ ಮಾಡುವ ದಿಶೆಯಲ್ಲಿ ಗಮನ ನೀಡಬೇಕು ಎಂದು ತಹಶೀಲ್ದಾರ್ ಸ್ವಾದಿ ತಿಳಿಸಿದರು.

ಶಿರಸ್ತೇದಾರ್ ಎಸ್. ಎಲ್. ಕಾಗಿ, ಸಮಾಜ ಕಲ್ಯಾಣ ಇಲಾಖೆಯ ವಸಂತ ಹಿರೇಮಠ, ಮಂಜುನಾಥ ಆಲಗೂರ, ರವಿ ಹುಕ್ಕೇರಿ, ಸಮಾಜದ ಮುಖಂಡರಾದ ಬಾಬು ಮಹಾಜನ, ಬಸವರಾಜ ದೊಡ್ಡಮನಿ, ಶಿವಲಿಂಗ ಗೊಂಬಿಗುಡ್ಡ, ಪ್ರಭಾಕರ ಛಲವಾದಿ, ಚಂದ್ರು ಹರಿಜನ, ಬಿ. ಎಂ. ಹಳೆಮನಿ, ರವಿ ಈಟಿ, ಮಂಜುಳಾ ಹಲಗಲಿ, ಸಂಗೀತಾ ಅಂಬಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ರಬಕವಿ–ಬನಹಟ್ಟಿ : ರಬಕವಿ ಬನಹಟ್ಟಿ ತಹಶೀಲ್ದಾರ್ ಕಾರ್ಯಾಲಯದಲ್ಲಿ ಡಾ. ಬಿ. ಆರ್. ಅಂಬೇಡ್ಕರ್ ಜಯಂತ್ಯೋತ್ಸವದ ಅಂಗವಾಗಿ ಅವರ ಭಾವಚಿತ್ರಕ್ಕೆ ತಹಶೀಲ್ದಾರ್ ಗಿರೀಶ ಸ್ವಾದಿ ಪೂಜೆ ಸಲ್ಲಿಸಿದರು.

## ಲಕ್ಷ್ಮಿ ಹೆಬ್ಬಾಳಕರ ಪಂಚಮಸಾಲಿ ಸಮುದಾಯಕ್ಕೆ ಸೇರಿದವರಲ್ಲ: ನಿರಾಣಿ ತಿರುಗೇಟು



ಬೆಳಗಾವಿ: 'ಸಚಿವೆ ಲಕ್ಷ್ಮಿ ಹೆಬ್ಬಾಳಕರ ಲಿಂಗಾಯತಪಂಚಮಸಾಲಿಸಮುದಾಯಕ್ಕೆ ಸೇರಿದವರಲ್ಲ. ಅವರು ಲಿಂಗಾಯತ ಬಣಜಿಗ ಸಮುದಾಯದವರು. ಕಿತ್ತೂರು ರಾಣಿ ಚನ್ನಮ್ಮನೊಂದಿಗೆ ಹೋಲಿಕೆ ಮಾಡಿಕೊಳ್ಳುವ ಅಧಿಕಾರ ನನಗೂ ಇಲ್ಲ, ಅವರಿಗೂ ಇಲ್ಲ' ಎಂದು ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷ ಮುರುಗೇಶ ನಿರಾಣಿ ತಿರುಗೇಟು ನೀಡಿದರು.

'ನಾನು ರಾಣಿ ಚನ್ನಮ್ಮನ ವಂಶಸ್ಥಳು. ನನ್ನ ಮೈಯಲ್ಲಿಪಂಚಮಸಾಲಿರಕ್ತಹರಿಯುತ್ತಿದೆ' ಎಂಬ ಸಚಿವೆ ಲಕ್ಷ್ಮಿ ಹೆಬ್ಬಾಳಕರ ಹೇಳಿಕೆಗೆ, ಇಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಅವರು ಹೀಗೆ ಪ್ರತಿಕ್ರಿಯಿಸಿದರು.

'ಬ್ರಿಟಿಷರವಿರುದ್ಧಹೋರಾಡಿದವೀರಮಹಿಳೆ ರಾಣಿ ಚನ್ನಮ್ಮ. ಈಗಷ್ಟೇ ಮಂತ್ರಿ ಆಗಿದ್ದೇನೆ ಎನ್ನುವ ಕಾರಣಕ್ಕೆ ಲಕ್ಷ್ಮಿ ಹೆಬ್ಬಾಳಕರ ಜೋರಾಗಿ ಮಾತನಾಡಬಾರದು. ಮದುವೆ ಆಗುವ ಮುನ್ನ, ಅವರು ಪಂಚಮಸಾಲಿ ಸಮುದಾಯಕ್ಕೆಸೇರಿದ್ದರು.ನಂತರಬಣಜಿಗ ಸಮುದಾಯದ ರವೀಂದ್ರ ಹೆಬ್ಬಾಳಕರ ಅವರೊಂದಿಗೆ ವಿವಾಹವಾದರು. ಹಿಂದೂ ಪರಂಪರೆಯಂತೆ ಹೆಣ್ಣು ಮಕ್ಕಳು ಪತಿಯ ಜಾತಿಗೆ ಸೇರುತ್ತಾರೆ. ಹಾಗಾಗಿ ಮದುವೆಯಾದ ನಂತರ ಲಕ್ಷ್ಮಿ ಬಣಜಿಗ ಸಮಾಜದವರಾಗಿದ್ದಾರೆ. ನನ್ನ ಮೈಯಲ್ಲಿ ಪಂಚಮಸಾಲಿ ರಕ್ತ ಹರಿಯುತ್ತಿದೆ ಎನ್ನುವುದು ಸೂಕ್ತವಲ್ಲ' ಎಂದರು.

'ಬೆಳಗಾವಿ ಲೋಕಸಭೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಸಹ ಬಣಜಿಗ ಸಮುದಾಯದವರು. ಈ ಕ್ಷೇತ್ರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿರುವ ಪಂಚಮಸಾಲಿ ಸಮುದಾಯದ ಮತಗಳನ್ನು ಸೆಳೆಯಲು ಲಕ್ಷ್ಮಿ ಅಪ್ಪಟ ಸುಳ್ಳು ಹೇಳುತ್ತಿದ್ದಾರೆ. ಮೃಣಾಲ್ ಪಂಚಮಸಾಲಿ ಆಗಲು ಸಾಧ್ಯವೇ ಇಲ್ಲ' ಎಂದು ಸವಾಲು ಹಾಕಿದರು.

'ಪಂಚಮಸಾಲಿ ಸಮುದಾಯಕ್ಕೆ ಬಿಜೆಪಿ ಸರ್ಕಾರದ ಅವಧಿಯಲ್ಲಿ ಪ್ರವರ್ಗ '2ಎ' ಮೀಸಲಾತಿ ಕೊಡಿಸಿದರೆ, ಬೆಳಗಾವಿಯಿಂದ ಕುಂದಾ ತಂದು ನಿಮ್ಮನ್ನು ಸನ್ಮಾನಿಸುವೆ ಎಂದು ಲಕ್ಷ್ಮಿ ಹೇಳಿದ್ದರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಮೂರೇ ತಿಂಗಳಲ್ಲಿ ಮೀಸಲಾತಿ ಕೊಡಿಸುವೆ. ನಾನು ಮೀಸಲಾತಿ ಕೊಡಿಸಿದರೆ, ಚಿನ್ನದ ಬಳೆ ಕೊಟ್ಟು ಸನ್ಮಾನಿಸಬೇಕು ಎಂದಿದ್ದರು. ಈಗ ನಿಮ್ಮ ಸರ್ಕಾರವೂ ಬಂದಿದೆ. ಮಂತ್ರಿಯೂ ಆಗಿದ್ದೀರಿ. ಆದರೂ, ಮೀಸಲಾತಿ ನೀಡುತ್ತಿಲ್ಲವೇಕೆ' ಎಂದು ಪ್ರಶ್ನಿಸಿದರು.

'ನಮ್ಮ ಸರ್ಕಾರ ಪಂಚಮಸಾಲಿ ಸಮುದಾಯಕ್ಕೆ ಅನ್ಯಾಯ ಮಾಡದೆ, '2ಡಿ' ಮೀಸಲಾತಿ ಘೋಷಿಸಿತ್ತು. ಸಚಿವೆ ಹೆಬ್ಬಾಳಕರ ನಿಜವಾಗಿಯೂ ಪಂಚಮಸಾಲಿ ಸಮುದಾಯದವರಾಗಿದ್ದರೆ, '2ಎ' ಮೀಸಲಾತಿ ಕೊಡಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹೇಳುತ್ತಿದ್ದರು' ಎಂದ ನಿರಾಣಿ, 'ಈಗ ಹೆಬ್ಬಾಳಕರ ಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ಮೀಸಲಾತಿ ಸಿಕ್ಕ ಬಳಿಕವೇ ಸಂಪುಟ ಸೇರಬೇಕು. ನಮ್ಮ ಸಮಾಜಕ್ಕೆ ಮೀಸಲಾತಿ ಸಿಕ್ಕರೆ, ಹೆಬ್ಬಾಳಕರ ಅವರಿಗೆ 1 ಕೆ.ಜಿ ಚಿನ್ನಾಭರಣ ನೀಡಿ ಸನ್ಮಾನಿಸುತ್ತೇವೆ. ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭೇಟಿಯಾಗಿ, ಅವರಿಗೆ ಇದಕ್ಕಿಂತ ಹೆಚ್ಚಿನ ಸ್ಥಾನಮಾನ ನೀಡುವಂತೆ ಒತ್ತಾಯಿಸುತ್ತೇವೆ' ಎಂದು ಹೇಳಿದರು.

'ನಮ್ಮ ಮೀಸಲಾತಿ ಹೋರಾಟ ಕಳೆದ 25 ವರ್ಷಗಳಿಂದ ನಡೆಯುತ್ತಿದೆ. ಆದರೆ, ಹೆಬ್ಬಾಳಕರ ಮೂರ್ನಾಲ್ಕು ವರ್ಷಗಳಿಂದ ಹೋರಾಟದಲ್ಲಿ ಭಾಗವಹಿಸುತ್ತಿದ್ದಾರೆ' ಎಂದರು.

'ಜಗದೀಶ ಶೆಟ್ಟರ್ ಹೊರಗಿನವರು' ಎಂಬ ಹೆಬ್ಬಾಳಕರ ಹೇಳಿಕೆಗೆ ತಿರುಗೇಟು ನೀಡಿದ ನಿರಾಣಿ, 'ಅಮ್ಮಾ ನೀವೇ ಬೆಳಗಾವಿಯವರಲ್ಲ. ಖಾನಾಪುರ ತಾಲ್ಲೂಕಿನ ಹಟ್ಟಿಹೊಳಿಯವರು. ಇದು ಕೆನರಾ ಲೋಕಸಭೆ ಕ್ಷೇತ್ರದ ವ್ಯಾಪ್ತಿಗೆ ಬರುತ್ತದೆ. ಆದರೆ, ಬೆಳಗಾವಿ ಗ್ರಾಮೀಣ ಕ್ಷೇತ್ರಕ್ಕೆ ಬಂದು ಶಾಸಕಿಯಾಗಿದ್ದಾರೆ.

ಇದನ್ನು ಬೆಳಗಾವಿ ಜನರು ನಿಮ್ಮನ್ನು ಪ್ರಶ್ನಿಸಿಲ್ಲ. ಇಂದಿರಾ ಗಾಂಧಿ, ಸೋನಿಯಾ ಗಾಂಧಿ, ಸಿದ್ದರಾಮಯ್ಯ ಬೇರೆ ಬೇರೆ ಕ್ಷೇತ್ರಗಳಲ್ಲಿ ಸ್ಪರ್ಧಿಸಿದ್ದಾರೆ. ಶೆಟ್ಟರ್ ಬೆಳಗಾವಿ ಅಷ್ಟೇ ಅಲ್ಲ; ಭಾರತದಲ್ಲಿ ಎಲ್ಲಿ ಬೇಕಾದರೂ ಸ್ಪರ್ಧೆ ಮಾಡುವ ಹಕ್ಕು ಹೊಂದಿದ್ದಾರೆ' ಎಂದರು.

# ಬಿಜೆಪಿ ಗೆದ್ದರೆ ಸಿರುಗುಪ್ಪಕ್ಕೆ ರೈಲು ಸಂಚಾರ: ಡಾ. ಬಸವರಾಜ



**ಸಿರುಗುಪ್ಪ :** ಕೊಪ್ಪಳ ಲೋಕಸಭಾ ಕ್ಷೇತ್ರವು ಬಿಜೆಪಿ ಅವಧಿಯಿಂದ ಅಭಿವೃದ್ಧಿ ಕಾರ್ಯ ಆರಂಭವಾಗಿದೆ. ಬಿಜೆಪಿಗೆ ಮತ ನೀಡಿ ಗೆಲ್ಲಿಸಿ ಸಿರುಗುಪ್ಪ ವಿಧಾನಸಭಾ ಕ್ಷೇತ್ರಕ್ಕೆ ರೈಲ್ವೆ ಸಂಚಾರ ಆರಂಭಿಸಲಾಗುವುದು ಎಂದು ಕೊಪ್ಪಳ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಬಸವರಾಜ ಕ್ಯಾವಟರ್ ಭರವಸೆ ನೀಡಿದರು.

ತೆಕ್ಕಲಕೋಟೆ ಮಹಾಶಕ್ತಿ ಕೇಂದ್ರದಲ್ಲಿ ಸೋಮವಾರ ನಾರಿಶಕ್ತಿ ವಂದನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕೊಪ್ಪಳ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಹಲವು ವಿಧಾನಸಭಾ ಕ್ಷೇತ್ರಗಳಲ್ಲಿ ಹತ್ತು ವರ್ಷಗಳ ಅವಧಿಯಲ್ಲಿ ರೈಲು ಸಂಚಾರ ಆರಂಭವಾಗಿವೆ. ಆದರೆ, ಸಿರುಗುಪ್ಪ ತಾಲೂಕಿಗೆ ರೈಲು ಸಂಚಾರ ಇಲ್ಲ. ಈ ಬಾರಿ ಬಿಜೆಪಿಗೆ ಮತ ನೀಡಿ ಗೆಲ್ಲಿಸಿದರೆ, ಆದ್ಯತೆ ಮೇರೆಗೆ ಸಿರುಗುಪ್ಪಕ್ಕೆ ರೈಲು ಸಂಚಾರ ಆರಂಭಿಸಲಾಗುವುದು ಎಂದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರದ ಅವಧಿಯಲ್ಲಿ ಬಾಲಕಿಯರ ವಿದ್ಯಾಭ್ಯಾಸ ಉತ್ತೇಜನೆಗೆ ವಿದ್ಯಾರ್ಥಿ ವೇತನ, ಮಹಿಳೆಯರ ಸ್ವಾವಲಂಬಿ ಜೀವನಕ್ಕಾಗಿ ಸ್ವ-ಯಂ ಉದ್ಯೋಗ ಕ್ಕೆ ಯೋಜನೆ ತರುವ ಮೂಲಕ ಮಹಿಳಾ ಸಬಲೀಕರಣ ಮಾಡಲಾಗುತ್ತಿದೆ. ಇನ್ನು ವಿಧಾನಸಭೆ ಹಾಗೂ ಲೋಕಸಭೆಯಲ್ಲಿ ಮಹಿಳಾ ಮೀಸಲಾತಿ ನೀಡಲು ಕಾಯ್ದೆ ತರುವ ಮೂಲಕ ಮಹಿಳಾ ಪರ ನಿಲುವನ್ನು ಸಾಬೀತು ಮಾಡಲಾಗಿದೆ.

ಆದ್ದರಿಂದ ಮಹಿಳಾ ಮತದಾರರು ಮೋದಿ ಅವರನ್ನು ಗೆಲ್ಲಿಸಲು ಬಿಜೆಪಿಗೆ ಮತ ನೀಡಬೇಕು ಎಂದು ಮತಯಾಚಿಸಿದರು.

ಈ ಸಂದರ್ಭದಲ್ಲಿ ಮಂಡಲ ಅಧ್ಯಕ್ಷ ಮಲ್ಲಿಕಾರ್ಜುನ ಕಮಟನಾಳ, ಮಾಜಿ ಶಾಸಕ ಸೋಮಲಿಂಗಪ್ಪ, ಯುವ ಮುಖಂಡ ದರಪ್ಪ ನಾಯಕ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುರೇಶ್ ಹುಡೇದ್, ದೊಡ್ಡ ಹುಲುಗಪ್ಪ, ಜೆಡಿಎಸ್ ತಾಲೂಕು ಅಧ್ಯಕ್ಷ ಶಿವಯ್ಯ, ಎಪಿಎಂಸಿ ಮಾಜಿ ಅಧ್ಯಕ್ಷ ನಾಗೇಶಪ್ಪ ರಾರಾವಿ, ಪ್ರತಾಪ್ ಚೌಧರಿ, ನಗರಸಭೆ ಸದಸ್ಯ ಮಧುಸೂದನ್ ಶೆಟ್ಟಿ, ಮಾಜಿ ತಾಲೂಕು ಅಧ್ಯಕ್ಷ ಸಿದ್ದಯ್ಯ ಸ್ವಾಮಿ ಸೇರಿ ಮತ್ತಿತರರಿದ್ದರು.

# ಯಲ್ಲಟ್ಟಿಯಲ್ಲಿ ಪೌರತ್ವ ತರಬೇತಿ ಶಿಬಿರ ಉದ್ಘಾಟನೆ



**ರಬಕವಿ-ಬನಹಟ್ಟಿ :** ಬನಹಟ್ಟಿಯ ಜೆ. ಎಸ್.ಎಸ್. ಶಿಕ್ಷಣ ಮಹಾವಿದ್ಯಾಲಯದ ವತಿಯಿಂದ ಯಲ್ಲಟ್ಟಿಯ ನಿರುಪಾಧೀಶ್ವರ ಮಠದಲ್ಲಿ ಪೌರತ್ವ ತರಬೇತಿ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಜನತಾ ಶಿಕ್ಷಣ ಸಂಘದ ಅಧ್ಯಕ್ಷರಾದ ಬಸವರಾಜ ಭದ್ರನ್ನವರ ಉದ್ಘಾಟಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜೆ. ಎಸ್.ಎಸ್. ಶಿಕ್ಷಣ ಮಹಾವಿದ್ಯಾಲಯದ ಕಾರ್ಯಾಧ್ಯಕ್ಷರಾದ ಶಂಕರ ಜಾಲಿಗಿಡದ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜಿ. ಎಚ್. ಮೋಪಗಾರ ಪೌರತ್ವ ಶಿಬಿರದ ಕುರಿತು ಮಾತನಾಡಿದರು. ಪ್ರಾಚಾರ್ಯರಾದ ಡಾ. ಎಂ. ವಿ. ಬೂದಿ ಅವರು ಶಿಬಿರದ ಗುರಿ ಮತ್ತು ಉದ್ದೇಶಗಳನ್ನು ಪ್ರಶಿಕ್ಷಣಾರ್ಥಿಗಳಿಗೆ ಹೇಳಿದರು.

ಕಾರ್ಯಕ್ರಮದಲ್ಲಿ ಬಸಪ್ಪ ಝುಳಕಿ, ಶಿಬಿರದ ಸಂಯೋಜಕರಾದ ಎಂ. ಎಸ್. ಮಠಪತಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಎನ್‌ಡಿಎ ಅಭ್ಯರ್ಥಿ ಡಾ. ಬಸವರಾಜ ಕ್ಯಾವಟರ್ ಪರ ಮತಯಾಚನೆ

# ದೇಶದ ಅಭಿವೃದ್ಧಿ ಬಿಜೆಪಿಯ ಸಂಕಲ್ಪ: ನವೀನ್



**ಕೊಪ್ಪಳ :** ಭಾರತದ ನಾಲ್ಕು ಬಲಿಷ್ಠ ಸ್ತಂಭಗಳಾದ ಯುವಶಕ್ತಿ, ನಾರಿ ಶಕ್ತಿ, ರೈತರು ಮತ್ತು ಬಡವರನ್ನು ಸಶಕ್ತಗೊಳಿಸುವುದು ಬಿಜೆಪಿಯ ಸಂಕಲ್ಪವಾಗಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ನವೀನ್ ಗುಳಗಣ್ಣನವರ್ ಹೇಳಿದರು.

ಕೊಪ್ಪಳ ವಿಧಾನಸಭಾ ಕ್ಷೇತ್ರದ ಬೇಟೆ-ಗೇರಿ ಗ್ರಾಮದಲ್ಲಿ ಸೋಮವಾರ ನಡೆದ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ದೇಶದ ಸಮಗ್ರ ಅಭಿವೃದ್ಧಿಯೇ ಬಿಜೆಪಿ ಸಂಕಲ್ಪ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಹತ್ತು ವರ್ಷದಲ್ಲಿ ರಸ್ತೆ, ರೈಲ್ವೆ, ಕುಡಿಯುವ ನೀರು, ಶೌಚಾಲಯ ಸೇರಿ ಮೂಲಸೌಕರ್ಯ ಅಭಿವೃದ್ಧಿಗೆ ಒತ್ತು ನೀಡಿ ಜನರು ಸ್ವಾವಲಂಬಿ ಬದುಕನ್ನು ಕಟ್ಟಿಕೊಳ್ಳಲು ಹಲವಾರು ಯೋಜನೆ ಜಾರಿ ಮಾಡಿದ್ದಾರೆ. ವಿಶ್ವವೇ ಭಾರತದತ್ತ ತಿರುಗಿ ನೋಡುವಂತೆ ಮಾಡಿದ ಮೋದಿ ಅವರನ್ನು ಮತ್ತೊಮ್ಮೆ

> ಕೊಪ್ಪಳ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಎಲ್ಲ ವಿಧಾನಸಭಾ ಕ್ಷೇತ್ರಗಳಲ್ಲಿ ಜೆಡಿಎಸ್ ಕಾರ್ಯಕರ್ತರು ಎನ್‌ಡಿಎ ಅಭ್ಯರ್ಥಿ ಡಾ.ಬಸವರಾಜ ಕ್ಯಾವಟರ್ ಪರ ಪ್ರಚಾರ ಮಾಡಿ. ಅಭ್ಯರ್ಥಿ ಗೆಲುವಿಗೆ ಶ್ರಮಿಸಬೇಕು.
>
> – ಸುರೇಶ ಭೂಮರಡ್ಡಿ
> **ಜೆಡಿಎಸ್ ಜಿಲ್ಲಾಧ್ಯಕ್ಷರು.**

ಪ್ರಧಾನಮಂತ್ರಿ ಮಾಡುವುದು ನಮ್ಮ ಗುರಿ ಎಂದು ತಿಳಿಸಿದರು.

ಕೊಪ್ಪಳ ಲೋಕಸಭಾ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿ ಡಾ.ಬಸವರಾಜ ಕ್ಯಾವಟರ್ ಅವರಿಗೆ ಮತ ನೀಡಿ ಅಭೂತಪೂರ್ವ ಗೆಲುವಿಗೆ ಕಾರ್ಯಕರ್ತರು ಶ್ರಮಿಸಬೇಕು. ಕೇಂದ್ರ ಸರ್ಕಾರದ ಪ್ರತಿಯೊಂದು ಯೋಜನೆ ಹಾಗೂ ಸಾಧನೆ ಮನೆ ಮನೆಗೆ ತಿಳಿಸಿ. ಇನ್ನು ಕೊಪ್ಪಳ ಲೋಕಸಭಾ ಕ್ಷೇತ್ರದಲ್ಲಿ ಸತತವಾಗಿ ಮೂರು ಬಾರಿ ಬಿಜೆಪಿ ಗೆಲುವು ಸಾಧಿಸಿದ್ದು, ಈ ಬಾರಿಯೂ ಗೆಲುವು ಸಾಧಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಹಿರಿಯ ಮುಖಂಡರಾದ ಚಂದ್ರಶೇಖರ ಕವಲೂರ್,ಮಾಜಿ ನಗರಸಭೆ ಸದಸ್ಯ ಮಾಂತೇಶ ಮೈನಹಳ್ಳಿ, ಈಶಪ್ಪ ಮಾದಿನೂರ್ ದೇವಪ್ಪ ಕಟ್ಟಿಮನಿ, ಮಾಜಿ ತಾಲೂಕ ಪಂಚಾಯತ್ ಮಾಜಿ ಸದಸ್ಯ ವಿರೇಶ್ ಸಜ್ಜನ , ಮಾಧ್ಯಮ ವಕ್ತಾರರಾದ ಸೋಮಶೇಖರಗೌಡ್ರು ಸೋಂಪುರ್,ನಾಗನಗೌಡ್ರುಮಾಲಿಪಾಟೀಲ,ವಿರೂಪಾಕ್ಷಗೌಡ್ರು, ನೀಲಕಂಠಯ್ಯ ಹಿರೇಮಠ್,ಶರಣಪ್ಪ ಜಡ್ಡಿ, ರೈತ ಮೋರ್ಚಾ ಜಿಲ್ಲಾಉಪಾಧ್ಯಕ್ಷ ವಿರೂಪಾಕ್ಷ ಹಳ್ಳಿ, ವಿರೂಪಾಕ್ಷಗೌಡ್ರು ಪಾಟೀಲ್, ತಿಪ್ಪಣ್ಣ ಮಾದನೂರ, ಹನುಮ ರೆಡ್ಡಿ, ಶೇಕಪ್ಪ ಲಕ್ಷೀಣಿ, ನವೀನ್ ಮಾದಿನೂರ್, ಬರಮಪ್ಪ ಬಾವಿ, ಗವಿಸಿದ್ದಪ್ಪ ಮಾಳೆಕೊಪ್ಪ , ಹೇಮರಡ್ಡಿ ನಾಗರಾಳ, ಜಗದೀಶ್ ಯತ್ನಾಳ್,ಹಾಗೂ ಎರಡು ಪಕ್ಷದ ಹಿರಿಯ ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು.

# ಜಾಲಿಹಾಳ ಚೆಕ್‌ಪೋಸ್ಟ: 5.55 ಲಕ್ಷ ನಗದು ಜಪ್ತಿ



**ಬಾಗಲಕೋಟೆ :** ಲೋಕಸಭಾ ಚುನಾವಣೆ-2024ರ ನೀತಿ ಸಂಹಿತೆ ಉಲ್ಲಂಘನೆಯಡಿ ಬಾದಾಮಿ ಮತಕ್ಷೇತ್ರ ವ್ಯಾಪ್ತಿಯ ಜಾಲಿಹಾಳ ಕ್ರಾಸ್ ಚೆಕ್‌ಪೋಸ್ಟನಲ್ಲಿ ಅನುಮಾನಾಸ್ಪದ ಹಾಗೂ ದಾಖಲೆ ಇಲ್ಲದ ಪ್ರತ್ಯೇಕ 6 ಪ್ರಕರಣಗಳಡಿ ಒಟ್ಟು 5.55 ಲಕ್ಷ ರೂ.ಗಳ ಹಣವನ್ನು ಜಪ್ತ ಮಾಡಿ ವಶಕ್ಕೆ ಪಡೆಯಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಜಾನಕಿ ಕೆ.ಎಂ ತಿಳಿಸಿದ್ದಾರೆ.

ಬುಧವಾರ ಜಾಲಿಹಾಳ ಕ್ರಾಸ್ ಚೆಕ್‌ಪೋಸ್ಟನಲ್ಲಿ ಎಚ್.ಬಿ.ಪೂಜಾರ ನೇತೃತ್ವದ ಸ್ಟ್ಯಾಟಿಕ್ ಸರ್ವೆಲೆನ್ಸ್ ತಂಡ ಗದಗ ಜಿಲ್ಲೆಯ ಲಕ್ಕುಂಡಿಯಿಂದ ಆಗಮಿಸಿದ ಗೂಡ್ಸ ವಾಹನದಲ್ಲಿ 1.66 ಲಕ್ಷ ರೂ, ಚಿಕ್ಕೋಡಿ ಜಿಲ್ಲೆಯ ಪಚ್ಚಾಪೂರದಿಂದ ಆಗಮಿಸಿದ ಗೂಡ್ಸ್ ವಾಹನದಲ್ಲಿ 1.20 ಲಕ್ಷ ರೂ, ಕೆರೂರಿನಿಂದ ಬರುತ್ತಿರುವ ಎರಡು ಗೂಡ್ಸ್ ವಾಹಗಳಲ್ಲಿ ಕ್ರಮವಾಗಿ 77 ಸಾವಿರ ರೂ, 69 ಸಾವಿರ ರೂ., ಲಕ್ಷೇಶ್ವರದಿಂದ ಬಂದ ವಾಹನದಲ್ಲಿ 54 ಸಾವಿರ ರೂ. ಹಾಗೂ ರೋಣದಿಂದ ಆಗಮಿಸಿದ ಗೂಡ್ಸ ವಾಹನದಲ್ಲಿ 69 ಸಾವಿರ ರೂ.ಗಳ ಹಣವನ್ನು ವಶಕ್ಕೆ ಪಡೆಯಲಾಗಿದೆ ಎಂದು ತಿಳಿಸಿದ್ದಾರೆ.

# ವಿಜಯಪುರ: 15 ತಿಂಗಳಲ್ಲಿ ಎಂಆರ್‌ಎನ್ ನಡಹಳ್ಳಿ ಸಕ್ಕರೆ ಕಾರ್ಖಾನೆ ಲೋಕಾರ್ಪಣೆ



ವಿಜಯಪುರ: ಕೃಷ್ಣಾ ನದಿಯ ನೀರು, ಫಲವತ್ತಾದ ಜಮೀನಿನ ಸದ್ಬಳಕೆ ಮಾಡಿಕೊಳ್ಳಲು ರೈತರು ಲಾಭದಾಯಕ ವಾಣಿಜ್ಯ ಬೆಳೆಗಳಿಗೆ ಒತ್ತು ಕೊಡಬೇಕು. 15 ತಿಂಗಳಲ್ಲಿ ಎಂಆರ್‌ಎನ್-ನಡಹಳ್ಳಿ ಸಕ್ಕರೆ ಕಾರ್ಖಾನೆ ಲೋಕಾರ್ಪಣೆಗೊಳ್ಳಲಿದ್ದು ರೈತ-ರಿಗೆ ವಾರಕ್ಕೊಮ್ಮೆ ಬಿಲ್ ಜಮಾ ಮಾಡಲು ಬದ್ಧರಾಗಿದ್ದೇವೆ. ರೈತರ ಜಮೀನಿನ ಮೇಲೆ ಭೋಜಾ ಕೂಡಿಸೊಲ್ಲ ಎಂದು ಮಾಜಿ ಸಚಿವ ಮುರುಗೇಶ ನಿರಾಣಿ ಹೇಳಿದರು.

ಬಸರಕೋಡ ವ್ಯಾಪ್ತಿಯಲ್ಲಿ ನಿರ್ಮಾಣಗೊಳ್ಳಲಿರುವ ಎಂಆರ್‌ಎನ್- ನಡಹಳ್ಳಿ ಎಥೆನಾಲ್, ಅಲೈಡ್ ಇಂಡಸ್ಟ್ರೀಜ್ ಸಕ್ಕರೆ ಕಾರ್ಖಾನೆಯ ಕಟ್ಟಡ ಕಾಮಗಾರಿಗೆ ಮಂಗಳವಾರ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ರೈತರ ಹೊಲಗಳಿಗೆ ಪಂಪ್‌ಸೆಟ್, ಬೀಜ ಗೊಬ್ಬರ ಕಾರ್ಖಾನೆ ವತಿಯಿಂದಲೇ ಕೊಡುತ್ತೇವೆ. ಮಳೆಗಾಲ ಶುರುವಾದ ಕೂಡಲೇ ಪ್ರತಿಯೊಬ್ಬರೂ ಕಬ್ಬು ಬೆಳೆಯಲು ಪ್ರಾರಂಭಿಸಬೇಕು ಎಂದರು.

ಬಿಜೆಪಿ ರೈತ ಮೋರ್ಚಾ ರಾಜ್ಯ ಘಟಕದ ಅಧ್ಯಕ್ಷ ಎ.ಎಸ್.ಪಾಟೀಲ

ನಡಹಳ್ಳಿ ಮಾತನಾಡಿ, ನಿರಾಣಿಯವರು ಸಕ್ಕರೆ ಉದ್ಯಮದ ಧ್ರುವತಾರೆ. ಬರಗಾಲದಲ್ಲೂ ಹೆಚ್ಚು ಕಬ್ಬು ನುರಿಸಿದ ಕೀರ್ತಿ ಅವರದ್ದಾಗಿದೆ. ಏಷ್ಯಾ ಖಂಡದಲ್ಲಿ ಹೆಚ್ಚು ಇಥೆನಾಲ್ ಉತ್ಪಾದನೆ ಮಾಡುತ್ತಿದ್ದಾರೆ.

ನನ್ನ ಹತ್ತು ವರ್ಷದ ಕಾರ್ಖಾನೆ ಕನಸು ಈಗ ನನಸಾಗುತ್ತಿದ್ದು, ರೈತರ ಬದುಕಿಗೆ ದಾ-ರಿದೀಪವಾಗಲಿದೆ ಎಂದು ತಿಳಿಸಿದರು.

ಕಾರ್ಖಾನೆಯ ನಿರ್ದೇಶಕ ಭರತಗೌಡ ಪಾಟೀಲ, ವಿಶಾಲ ನಿರಾಣಿ, ಢವಳಗಿಯ ಘನಮಠೇಶ್ವರ ಸ್ವಾಮೀಜಿ, ಉದ್ಯಮಿ ಧನುಷ್ ಶ್ರೀನಿವಾಸ, ಶರತ್ ಪಾಟೀಲ ನಡಹಳ್ಳಿ, ಅಶೋಕ ತಡಸದ, ಎಂ.ಆರ್.ನಾಡಗೌಡ, ಮಲಕೇಂದ್ರಗೌಡ ಪಾಟೀಲ, ಮುತ್ತು ಅಂಗಡಿ ಇದ್ದರು.

# ಕಳುವು ; 9.50 ಲಕ್ಷ ಮೌಲ್ಯದ ಚಿನ್ನಾಭರಣ ವಶ, ಆರೋಪಿ ಬಂಧನ



ಹುಬ್ಬಳ್ಳಿ: ಗೋಕುಲ ಬಸ್ ನಿಲ್ದಾಣದಲ್ಲಿ ಮಹಿಳೆಯೊಬ್ಬರ ವ್ಯಾನಿಟಿ ಬ್ಯಾಗ್‌ನಲ್ಲಿದ್ದ ಚಿನ್ನಾಭರಣ ಕಳವು ಮಾಡಿದ್ದ ಆರೋಪಿ ಮಹಿಳೆಯನ್ನು ಗೋಕುಲ ಠಾಣೆ ಪೊಲೀಸರು ಬಂಧಿಸಿ, ?9.50 ಲಕ್ಷ ಮೌಲ್ಯದ ಚಿನ್ನಾಭರಣ ವಶಪಡಿಸಿಕೊಂಡಿದ್ದಾರೆ.

ತಮಿಳುನಾಡಿನಕುಪ್ಪಂನಿವಾಸಿಸಂಧ್ಯಾಬಂಧಿತ ಆರೋಪಿ. ಬಸ್ ನಿಲ್ದಾಣದ ಪ್ಲಾಟ್‌ಫಾರ್ಮ್ 4ರ ಬಳಿ ಜನವರಿ 5ರಂದು ಮಹಿಳೆ ಬಸ್ ಹತ್ತುವಾಗ, ಆರೋಪಿ ಅವರ ವ್ಯಾನಿಟಿ ಬ್ಯಾಗ್‌ನಲ್ಲಿದ್ದ 139 ಗ್ರಾಂ ಚಿನ್ನಾಭರಣ ಕಳವು ಮಾಡಿದ್ದಳು. ಗೋಕುಲ ರೋಡ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ನಿಲ್ದಾಣದ ಬಳಿಯಿರುವ ಸಿಸಿಟಿವಿ ಕ್ಯಾಮೆರಾಗಳನ್ನು ಪರಿಶೀಲನೆ ನಡೆಸಿದ ಪೊಲೀಸರಿಗೆ,

ಆರೋಪಿಯ ಮುಖಚಹರೆ ಪತ್ತೆಯಾಗಿತ್ತು. ತಮಿಳುನಾಡಿನವಳು ಎನ್ನುವ ಖಚಿತ ಮಾಹಿತಿ ಆಧರಿಸಿದ ಇನ್‌ಸ್ಪೆಕ್ಟರ್ ಪ್ರವೀಣ ನೀಲಮ್ಮನವರ ನೇತೃತ್ವದ ತಂಡ ಕಾರ್ಯಾಚರಣೆ ನಡೆಸಿತ್ತು.

ಅಪಘಾತ; ಚಾಲಕ ಸಾವು: ಹುಬ್ಬಳ್ಳಿ ತಾಲ್ಲೂಕಿನ ಶಿರಗುಪ್ಪಿ ಗ್ರಾಮದ

ರಾಷ್ಟ್ರೀಯ ಹೆದ್ದಾರಿಯಲ್ಲಿರುವ ಸಂಗಮ ಪಾರ್ಕ್ ಬಳಿಯ ರಸ್ತೆ ವಿಭಜಕಕ್ಕೆ ಕಾರು ಡಿಕ್ಕಿ ಹೊಡೆದ ಪರಿಣಾಮ, ಚಾಲಕ ಸಾಧಿಕ ಅಣ್ಣಿಗೇರಿ(21) ಮೃತಪಟ್ಟಿದ್ದು, ನಾಲ್ವರು ಗಾಯಗೊಂಡಿದ್ದಾರೆ.

ಮಹ್ಮದ್‌ಸೋಹೆಲ್, ಮುಸ್ತುಮ್, ಸೀರಾಜ್ ಮತ್ತು ತಯ್ಯಬ್ ಗಾಯಗೊಂಡವರು. ಗದಗ ಕಡೆಯಿಂದ ಹುಬ್ಬಳ್ಳಿಗೆ ಬರುತ್ತಿದ್ದಾಗ ಕಾರು ಚಾಲಕನ ನಿಯಂತ್ರಣ ತಪ್ಪಿ ರಸ್ತೆ ವಿಭಜಕ್ಕೆ ಡಿಕ್ಕಿ ಹೊಡೆದಿದೆ. ಗಂಭೀರ


ಗಾಯಗೊಂಡವರನ್ನು ಕಿಮ್ಸ್‌ಗೆ ದಾಖಲಿಸಲಾಗಿತ್ತು. ಅವರಲ್ಲಿ ಚಾಲಕ ಚಿಕಿತ್ಸೆಗೆ ಸ್ಪಂದಿಸದೆಮೃತಪಟ್ಟಿದ್ದಾರೆಎಂದುಪೊಲೀಸರು ತಿಳಿಸಿದ್ದಾರೆ. ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಚಿನ್ನಾಭರಣ ಕಳವು: ಹುಬ್ಬಳ್ಳಿ ತಾಲ್ಲೂಕಿನ ತಾ-ರಿಹಾಳ ಗ್ರಾಮದ ಬಸವರೇಶ್ವರ ನಗರದ ನಿವಾಸಿ ಸಿದ್ದರಾಯ ಗುಬ್ಬಿ ಅವರ ಮನೆ ಬಾಗಿಲಿನ ಬೀಗ ಮುರಿದು, ?3.18 ಲಕ್ಷ ಮೌಲ್ಯದ 54 ಗ್ರಾಂ ಚಿನ್ನಾಭರಣ ಹಾಗೂ 260 ಗ್ರಾಂ ಬೆಳ್ಳಿಯ ಆಭರಣ ಕಳವು ಮಾಡಲಾಗಿದೆ. ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವಿದ್ಯಾರ್ಥಿನಿ ನಾಪತ್ತೆ: ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಕಡಿಮೆ ಅಂಕ ಬಂದಿದೆ ಎಂದು ವಿದ್ಯಾನಗರದ ಅಮೃತ ಟಾಕೀಜ್ ಬಳಿಯ ವಿದ್ಯಾರ್ಥಿನಿಯೊಬ್ಬಳು ಮನೆಗೆ ಬಾರದೆ ನಾಪತ್ತೆಯಾಗಿದ್ದಾಳೆ.

ಕಡಿಮೆ ಅಂಕ ಗಳಿಸಿದ್ದರಿಂದ ಮನನೊಂದು ಮನೆಬಿಟ್ಟು ಹೋಗಿದ್ದಾಳೆ ಎಂದು ದೂರಿನಲ್ಲಿ ಪಾಲಕರು ತಿಳಿಸಿದ್ದಾರೆ. ವಿದ್ಯಾನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ನಿಸರ್ಗದ ಬದಲಾವಣೆ ಮುನ್ಸೂಚನೆ ಯುಗಾದಿ ನಿವೃತ್ತ ಡಿವೈಎಸ್‌ಪಿ ಬಸವರಾಜ ಚೌಕಿಮಠ




ವಿಜಯಪುರ: ಸನಾತನ ಸಂಸ್ಕೃತಿಯ ಸಂವತ್ಸರದ ಆರಂಭದ ಹಬ್ಬವೆ ಯುಗಾದಿ, ಜನರು ನಿಸರ್ಗದಲ್ಲಾಗುವ ಬದಲಾವಣೆ ಯಿಂದಲೇ ಯುಗಾದಿ ಹಬ್ಬವನ್ನು ಗುರುತಿಸುತ್ತಾರೆ ಎಂದು ನಿವೃತ್ತ ಡಿವೈಎಸ್‌ಪಿ ಬಸವರಾಜ ಚೌಕಿಮಠ ಹೇಳಿದರು.

ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ 'ಯುಗಾದಿ ಕಾವ್ಯ ಸಂಭ್ರಮ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬೇವು ಬೆಲ್ಲದ ಸಂಕೇತವಾಗಿ, ಕಷ್ಟ ಸುಖಗಳನ್ನುಸಮಾನವಾಗಿಸ್ವೀಕ-ರಿಸುವಂತೆಯುಗಾದಿಹೇಳುವುದು ಅದರ ವೈಶಿಷ್ಟ್ಯವಾಗಿದೆ. ಕಾವ್ಯ ರಚಿಸುವ ಸಾಮರ್ಥ್ಯ ನಿರಂತರ ಅಧ್ಯಯನ ಶೀಲತೆಯಿಂದ ಮಾತ್ರ ಪಡೆಯಬಹುದಾಗಿದೆ ಎಂದು ಕಾವ್ಯ ವಾಚನ ಮಾಡಿದ ಕವಿಗಳ ಕುರಿತು ಹೇಳಿದರು. ಪತ್ರಕರ್ತ ಈರಣ್ಣ ಗೌಡರ ಮಾತನಾಡಿ, ಕವಿತೆ ಹುಡುಗಾಟವಲ್ಲ, ಅದೊಂದು ಹುಡುಕಾಟ. ಕವಿಯಾದವನು ನಿರಂತರ ಸಂಶೋಧಕನಾಗಿರಬೇಕು.

ಸಮಾಜ ತಿದ್ದುವ ಕಾವ್ಯಗಳು ಇಂದು ಅತ್ಯಂತ ಅವಶ್ಯಕವಾಗಿವೆ. ಯುವ ಸಾಹಿತಿಗಳನ್ನು ಸಾಹಿತ್ಯದ ಮುಖ್ಯವಾಹಿನಿಗೆ ತರುವಲ್ಲಿ, ಕನ್ನಡ ಸಾಹಿತ್ಯ ಪರಿಷತ್ತಿನ ಕಾರ್ಯ ಶ್ಲಾಘನೀಯ ಎಂದರು.

ಚುಟುಕು ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಜಗದೀಶ ಸಾಲಳ್ಳಿ ಮಾತನಾಡಿ,

ಜಿಲ್ಲಾದ್ಯಂತ ಎಲೆಮರೆಯ ಕಾಯಿಯಂತಿರುವ ಯುವ ಪ್ರತಿಭಾವಂತ ಕವಿಗಳನ್ನು ಗುರುತಿಸಿ ಕನ್ನಡ ಸಾಹಿತ್ಯ ಪರಿಷತ್ತು ಅವಕಾಶ ನೀಡುತ್ತಿರುವದು ಹೆಮ್ಮೆಯ ಸಂಗತಿ ಎಂದರು.

ಜ್ಯೋತಿ ಚೌಕಿಮಠ, ಗುರಣ್ಣ ಹಂಚನಾಳ, ಇಸಾಕ ಸಾರವಾಡ, ಅಭಿಷೇಕ ಚಕ್ರವರ್ತಿ, ಸುಭಾಶ್ಚಂದ್ರ ಕನ್ನೂರ, ಮಾಧವ ಗುಡಿ, ಸುರೇಶ ಜತ್ತಿ, ಹಾಸಿಂಪೀರ ವಾಲಿಕಾರ, ಸಂಗಮೇಶ ಮೇತ್ರಿ, ಕಮಲಾ ಮುರಾಳ, ರಾಜೇಸಾಬ ಶಿವನಗುತ್ತಿ, ಜಿ.ಎಸ್ ಬಳ್ಳೂರ, ರಜಾಕ ಮುಲ್ಲಾ, ಯಾಕೂಬ ನಾಟೀಕಾರ, ಲತಾ ಗುಂಡಿ, ಸತ್ಯಣ್ಣ ಹಡಪದ, ಅವಿನಾಶ ದನ್ಯಾಳ, ಅಣ್ಣುಗೌಡ ಬಿರಾದಾರ ಇದ್ದರು.

# ಪಿಯು ಫಲಿತಾಂಶ: ಹಳ್ಳಿ ಹುಡುಗಿ ರಾಜ್ಯಕ್ಕೆ ದ್ವಿತೀಯ



ಲಕ್ಷ್ಮೇಶ್ವರ: ಮನೆಯಲ್ಲಿ ಕಿತ್ತು ತಿನ್ನುವ ಬಡತನ. ತಂದೆ ತಾಯಿ ದಿನದ ಕೂಲಿಗೆ ಹೋಗದಿದ್ದರೆ ಒಲೆ ಉರಿಯದು. ಯಾವುದೇ ಸೌಲಭ್ಯ ಇಲ್ಲದ ತಗಡಿನ ಮನೆ. ಇಂಥ ಮನೆಯಲ್ಲಿ ದನಕರುಗಳ ಚಾಕರಿ ಮಾಡುತ್ತಲೇ ಓದಿ ದ್ವಿತೀಯ ಪಿಯುಸಿ ಕಲಾ ವಿಭಾಗದಲ್ಲಿ ರಾಜ್ಯಕ್ಕೆ ಎರಡನೇ ರ್‍ಯಾಂಕ್ ಪಡೆದಿದ್ದಾಳೆ ಲಕ್ಷ್ಮೇಶ್ವರ ತಾಲ್ಲೂಕು ಆದರಹಳ್ಳಿ ಗ್ರಾಮದ ರವೀನಾ ಸೋಮಪ್ಪ ಲಮಾಣಿ.

ರವೀನಾ ಮೊದಲಿನಿಂದಲೂ ಓದಿನಲ್ಲಿ ಜಾಣೆ. ಒಂದನೇ ತರಗತಿಯಿಂದ ಐದನೇ ತರಗತಿಯನ್ನು ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಪೂರೈಸಿರುವ ಈಕೆ 6?8ನೇ ತರಗತಿಯನ್ನು ಮುಂಡರಗಿ ತಾಲ್ಲೂಕು ಡಂಬಳದ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಮತ್ತು 9 ಮತ್ತು 10ನೇ ತರಗತಿಯನ್ನು ತಾಲ್ಲೂಕಿನ ಪುಟಗಾಂವ್‌ಬಡ್ನಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಕಲಿತಿದ್ದಾಳೆ.

ಧಾರವಾಡದ ಕೆಇ ಬೋರ್ಡ್ ಸಂಸ್ಥೆಯಲ್ಲಿ ಕಲಾ ವಿಭಾಗದಲ್ಲಿ ಪಿಯುಸಿ ಓದಿದ ರವೀನಾ 595 ಅಂಕ ಪಡೆದಿದ್ದಾರೆ. ಮುಂದೆ ಯುಪಿಎಸ್ಸಿ ಓದುವ ಬಯಕೆ ಅವರದ್ದು.

ಕನ್ನಡ-99, ಹಿಂದಿ-98, ಇತಿಹಾಸ-100, ಭೂಗೋಳ-100, ರಾಜ್ಯಶಾಸ್ತ್ರ 100, ಶಿಕ್ಷಣ-98 ಅಂಕ ಪಡೆದಿದ್ದಾಳೆ.

ಸೋಮಪ್ಪ ಮತ್ತು ರೇಣವ್ವ ಲಮಾಣಿ ಅವರ ಮೂರನೇ ಮಗಳು ರವೀನಾ. 'ನಮ್ಮ ಮಗಳು ಮದ್ಲಾಂಗಿದ್ದೂ ಓದೋದರಾಗ ಭಾಳ ಹುಷಾರ ಇದ್ಲು. ನಮ್ಮ ಕೂಡ ಹೊಲಾ ಮನಿ ಕೆಲಸ ಮಾಡಕೋತ ಅಭ್ಯಾಸ ಮಾಡ್ಯಾಳ' ಎಂದು ರವೀನಾ ಅವರ ತಂದೆ ಸೋಮಣ್ಣ ಲಮಾಣಿ ಹೇಳಿದರು.

# ಹೆಬ್ಬಾಳಕರ ನಮ್ಮವರು ನಿರಾಣಿ ಮಲ್ಲಪ್ಪ ಶೆಟ್ಟಿಯಂಥವರು: ಆರ್.ಕೆ.ಪಾಟೀಲ



ಬೆಳಗಾವಿ: 'ಪಂಚಮಸಾಲಿ ಮೀಸಾಲಾತಿ ಹೋರಾಟದಲ್ಲಿ ಸಚಿವೆ ಲಕ್ಷ್ಮಿ ಹೆಬ್ಬಾಳಕರ ಕುಟುಂಬ ತೊಡಗಿಸಿಕೊಂಡಿದೆ. ಹಾಗಾಗಿ ಅವರನ್ನು ನಮ್ಮವರೇ ಎಂದು ಒಪ್ಪಿಕೊಂಡಿದ್ದೇವೆ' ಎಂದು ಅಖಿಲ ಭಾರತ ಲಿಂಗಾಯತ ಪಂಚಮಸಾಲಿ ಸಮಾಜದ ಜಿಲ್ಲಾ ಘಟಕದ ಗೌರವಾಧ್ಯಕ್ಷ ಆರ್.ಕೆ.ಪಾಟೀಲ ಹೇಳಿದರು.

'ಲಕ್ಷ್ಮಿ ಹೆಬ್ಬಾಳಕರ ಲಿಂಗಾಯತ ಪಂಚಮಸಾಲಿ ಸಮುದಾಯಕ್ಕೆ ಸೇರಿದವರಲ್ಲ' ಎಂಬ ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷ ಮುರುಗೇಶ ನಿರಾಣಿ ಹೇಳಿಕೆಗೆ, ಇಲ್ಲಿ ಶುಕ್ರವಾರ ಸುದ್ದಿಗಾರ–ರಿಗೆ ಅವರು ಪ?ರತಿಕ್ರಿಯಿಸಿದರು.

'ನೀವು ಅಧಿಕಾರದಲ್ಲಿದ್ದಾಗ ನಮ್ಮ ಹೋರಾಟ ವಿರೋಧಿಸಿದ್ದೀರಿ. ಅಧಿಕಾರಕ್ಕಾಗಿ ನಮ್ಮ ಸಮಾಜ ಒಡೆದ ಶ್ರೇಯಸ್ಸು ನಿಮಗೆ ಸಲ್ಲುತ್ತದೆ. ರಾಣಿ ಚನ್ನಮ್ಮನ ಆಸ್ಥಾನದಲ್ಲಿದ್ದ ಮಲ್ಲಪ್ಪ ಶೆಟ್ಟಿ ಕುತಂತ್ರಿ ಆಗಿದ್ದರು. ಸಮಾಜ ವಿರೋಧಿ ಕೆಲಸ ಮಾಡುತ್ತಿರುವ ನಿರಾಣಿಯವರೇ ನೀವು ಈಗಿನ ಮಲ್ಲಪ್ಪ ಶೆಟ್ಟಿ. ಏನೇನೋ ದಾಖಲೆ ಇವೆ ಎಂದು ಹೇಳಿ ಪಂಚಮಸಾಲಿ ಶ್ರೀಗಳಿಗೆ ಬ್ಲ್ಯಾಕ್‌ಮೇಲ್ ಮಾಡುತ್ತಿದ್ದೀರಿ. ಶ್ರೀಗಳ ವಿರುದ್ಧ ಮಾತನಾಡಿದರೆ ಸಮಾಜದಿಂದ ತಕ್ಕ ಪಾಠ ಕಲಿಸುತ್ತೇವೆ' ಎಂದು ಹೇಳಿದರು.

ಮುಖಂಡ ಅಶೋಕ ಗೋಪನಾಳ, 'ಮೀಸಲಾತಿ ವಿಚಾರದಲ್ಲಿ ಮುರುಗೇಶ ನಿರಾಣಿ ನಮಗೆ ಅನ್ಯಾಯ ಮಾಡಿದ್ದಾರೆ. ಒಂದುವೇಳೆ ಅನ್ಯಾಯ ಮಾಡಿಲ್ಲ ಎಂದಾದರೆ, ಧರ್ಮಸ್ಥಳ ಮಂಜುನಾಥನ ಸನ್ನಿಧಾನಕ್ಕೆ ಬಂದು ಪ್ರಮಾಣ ಮಾಡಿ' ಎಂದು ಸವಾಲು ಹಾಕಿದರು.

'ನಮ್ಮ ಸಮುದಾಯಕ್ಕೆ ಮೀಸಲಾತಿ ಕೊಡಬೇಡಿ ಎಂದು ಬಿ.ಎಸ್.ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ಅವರಿಗೆ ತಾಕೀತು ಮಾಡಿದ್ದ ನೀವೇ ಈಗ ಲಕ್ಷ್ಮಿ ಹೆಬ್ಬಾಳಕರ ಪಂಚಮಸಾಲಿ ಅಲ್ಲ ಎನ್ನುತ್ತಿದ್ದೀರಿ. ಬಸನಗೌಡ ಪಾಟೀಲ ಯತ್ನಾಳ, ವಿಜಯಾನಂದ ಕಾಶಪ್ಪನವರ ಇರದಿದ್ದರೆ, ನಮ್ಮ ಹೋರಾಟ ಅರ್ಧಕ್ಕೆ ನಿಲ್ಲುತ್ತಿತ್ತು. ಹೆಣ್ಣುಮಗಳಾದ ಲಕ್ಷ್ಮಿ ಸಮಾಜಕ್ಕಾಗಿ ಹೋರಾಡಿದರು. ಗಂಡುಮಗನಾದ ನೀವು ಏನು ಮಾಡಿದ್ದೀರಿ' ಎಂದು ಪ್ರಶ್ನಿಸಿದರು.

ಪ್ರತಿಭಟನೆ: ಅಖಿಲ ಭಾರತ ಲಿಂಗಾಯತ ಪಂಚಮಸಾಲಿ ಮಹಾಸಭಾದ ಮುಖಂಡರು ನಿರಾಣಿ ವಿರುದ್ಧ ಪ್ರತಿಭಟನೆ ನಡೆಸಿದರು. ನಿರಾಣಿ ಭಾವಚಿತ್ರ ಹರಿದು ಹಾಕಿ, ಪ್ರತಿಕೃತಿ ದಹಿಸಲು ಮುಂದಾದರು. ಆಗ ಪೊಲೀಸರು ಪ್ರತಿಕೃತಿ ಕಸಿದುಕೊಂಡರು.

# ಬಸ್ತವಾಡ: ಕಾಡಸಿದ್ಧೇಶ್ವರ ಜಾತ್ರೆ ಸಂಪನ್ನ



ಹುಕ್ಕೇರಿ: ತಾಲ್ಲೂಕಿನ ಬಸ್ತವಾಡ ಗ್ರಾಮದ ಕಾಡಸಿದ್ಧೇಶ್ವರ ದೇವರ ಜಾತ್ರಾ ಮಹೋತ್ಸವ ಏ.8 ರಿಂದ 12ರವರೆಗೆ ಸಂಭ್ರಮದಿಂದ ಜರುಗಿತು.

ಏ.8ರಂದು ಜಾತ್ರೆಯು ಭಕ್ತ–ರಿಗೆ ಪ್ರಸಾದ ಸೇವೆಯ ಮೂಲಕ ಪ್ರಾರಂಭವಾಯಿತು. ಅಂ–ದು ರಾತ್ರಿ ಬಸ್ತವಾಡ ಹಾಗೂ ಸುತ್ತಲಿನ ಗ್ರಾಮಗಳ ಭಜನಾ ಮಂಡಳಿಯವರಿಂದ ಭಜನೆ ಕಾರ್ಯಕ್ರಮ ಜರುಗಿತು.

ಏ.9ರಂದು ಬೆಳಗ್ಗೆ ಸಿದ್ಧಿವಿನಾಯಕ ಹಾಗೂ ಕಾಡಸಿದ್ಧೇಶ್ವರರ ಗದ್ದುಗೆಗೆ ರುದ್ರಾಭಿಷೇಕ, ಸಂಜೆ 4ಕ್ಕೆ ಪಲ್ಲಕ್ಕಿ ಉತ್ಸವ ಮೆರವಣಿಗೆ ನಡೆಯಿತು. ರಾತ್ರಿ 10 ಗಂಟೆಗೆ ಕಾಡಸಿದ್ಧೇಶ್ವರ ನಾಟ್ಯ ಸಂಘ ಬಸ್ತವಾಡ ಇವರಿಂದ 'ಸಂಗ್ಯಾ ಬಾಳ್ಯಾ' ಬಯಲಾಟ ಪ್ರದರ್ಶನಗೊಂಡಿತು.

ಏ.10ರಂದು ಬೆಳಿಗ್ಗೆ 9ಕ್ಕೆ ಓಟದ ಸ್ಪರ್ಧೆ ಹಾಗೂ ಸೈಕಲ್ ಓಡಿಸುವ ಸ್ಪರ್ಧೆ ಹಮ್ಮಿಕೊಳ್ಳಲಾಗಿತ್ತು. ರಾತ್ರಿ 10ಕ್ಕೆ ರಸಮಂಜರಿ ಕಾರ್ಯಕ್ರಮ ಜರುಗಿದವು. ಏ.11ರಂದು ಬೆಳಗ್ಗೆ ಪಲ್ಲಕ್ಕಿ ಉತ್ಸವ ಮೆರವಣಿಗೆ, ಸಂಜೆ 4ಕ್ಕೆ ಜಂಗಿ ಕುಸ್ತಿ ಜರುಗಿ–ತು. ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘದ ನಿರ್ದೇಶಕ ಪೃಥ್ವಿ ಕತ್ತಿ ಕುಸ್ತಿ ಪಂದ್ಯಾವಳಿಗೆ ಚಾಲನೆ ನೀಡಿದರು. ರಾತ್ರಿ 10ಕ್ಕೆ ಪಂಡಿತ ಪಂಚಾಕ್ಷರಿ ನಾಟ್ಯ ಸಂಘದವರಿಂದ 'ಹಣೆಬರಹದ ಹೊತ್ತು, ಯಾರಿಗೆ ಗೊತ್ತು' ನಾಟಕ ಪ್ರದರ್ಶನಗೊಂಡಿತು.

ಏ.12ರಂದು ಬೆಳಗ್ಗೆ ಪಲ್ಲಕ್ಕಿ ಉತ್ಸವ ಮೆರವಣಿಗೆ ಹಾಗೂ ಟೆಂಗಿನ ಕಾಯಿ ಹಾರಿಸುವುದರ ಮೂಲಕ ಜಾತ್ರೆ ಸಂಪನ್ನಗೊಂಡಿತು.

ಶಾಸಕ ನಿಖಿಲ್ ಕತ್ತಿ, ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ, ಬಾಗೇವಾಡಿ ಬ್ಯಾಂಕ್ ಅಧ್ಯಕ್ಷ ಪವನ್ ಕತ್ತಿ, ಜೊಲ್ಲೆ ಉದ್ಯೋಗ ಸಮೂಹದ ಸಂಸ್ಥೆಯ ಅಧ್ಯಕ್ಷ ಬಸವಪ್ರಭು ಜೊಲ್ಲೆ ಅವರು ದೇವರ ದರ್ಶನ ಪಡೆದರು.

ಮುಖಂಡರಾದ ಪರಗೌಡ ಪಾಟೀಲ, ಶಂಕರಗೌಡ ಪಾಟೀಲ, ಆನಂದ ಲಕ್ಕುಂಡಿ, ದಯಾನಂದ ವಂಟಮೂರಿ, ಸಿದ್ಧಗೌಡ ಪಾಟೀಲ, ಕಾಡಪ್ಪ ಮಗದುಮ್ಮ, ಅಭಿಷೇಕ ಪಾಟೀಲ, ಮಹಾಂತೇಶ ಪೂಜಾರಿ, ಕಾಡೇಶ ಪಾಟೀಲ, ಅಶೋಕ ಪಾಟೀಲ, ಸಿದ್ದು ಪಾಟೀಲ, ಸಂಜು ಮಗದುಮ್ಮ, ನಾಗಪ್ಪ ಮಗದುಮ್ಮ, ಬಸಗೌಡ ಪಾಟೀಲ, ಬಸಯ್ಯ ಪೂಜಾರಿ, ಕುಮಾರ ಮಗದುಮ್ಮ ಇತರರು ಇದ್ದರು.

# ಬಿಜೆಪಿಯಲ್ಲಿ ಮತ್ತೆ ಅಸಮಾಧಾನ ಸ್ಫೋಟ



ಕೋಲಾರ/ಬಂಗಾರಪೇಟೆ: ಲೋಕಸಭೆ ಚುನಾವಣೆಗೆ ಎನ್‌ಡಿಎ ಮೈತ್ರಿಕೂಟ ಕೋಲಾರ ಕ್ಷೇತ್ರದಲ್ಲಿ ಪ್ರಚಾರ ಭರಾಟೆಯಲ್ಲಿ ತೊಡಗಿರುವ ಮಧ್ಯೆಯೇ ಜಿಲ್ಲಾ ಬಿಜೆಪಿಯಲ್ಲಿ ಮತ್ತೆ ಅಸಮಾಧಾನ ಸ್ಫೋಟಗೊಂಡಿದೆ.

ಕೋಲಾರ ಹೊರವಲಯದ ನಾರಾಯಣಿ ಕನ್ವೆನ್ಷನ್ ಸಭಾಂಗಣದಲ್ಲಿ ಗುರುವಾರ ನಡೆದ ದಲಿತ ಸಂಘಟನೆಗಳ ಸ್ವಾಭಿಮಾನಿ ಸಮಾವೇಶಕ್ಕೆ ತಮಗೆ ಆಹ್ವಾನ ನೀಡಿಲ್ಲವೆಂದು ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಬಿ.ವಿ.ಮಹೇಶ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಸಂಬಂಧ ಬಂಗಾರಪೇಟೆಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿರುವ ಮಹೇಶ್, 'ಸಂಸದ ಮುನಿಸ್ವಾಮಿ ನೇತೃತ್ವದಲ್ಲಿ ನಡೆದ ಸಮಾವೇಶಕ್ಕೆ ನನಗೆ, ತಂದೆ ಹಾಗೂ ಮಾಜಿ ಶಾಸಕ ಬಿ.ಪಿ.ವೆಂಕಟಮುನಿಯಪ್ಪ, ಕೆಜಿಎಫ್ ಮಾಜಿ ಶಾಸಕ ವೈ.ಸಂಪಂಗಿ ಅವರಿಗೆ ಆಹ್ವಾನ ನೀಡಿಲ್ಲ. ನಾನೂ ದಲಿತ ಸಮಾಜ–ಕ್ಕೆ ಸೇರಿದ ಮುಖಂಡ' ಎಂದು ಬೇಸರ ವ್ಯಕ್ತಪಡಿಸಿದರು.

'ಬಂಗಾರಪೇಟೆ ವಿಧಾನಸಭೆ ಕ್ಷೇತ್ರದಲ್ಲಿ ಮುಂದಿನ ಅಭ್ಯರ್ಥಿ ತಾವೇ ಎಂದು ಮುನಿಸ್ವಾಮಿ ಹೇಳುತ್ತಿದ್ದಾರೆ. ಬಂಗಾರಪೇಟೆ ವಿಧಾನಸಭೆ ಕ್ಷೇತ್ರವನ್ನು ಬೇರೊಬ್ಬರಿಗೆ ಬಿಟ್ಟು ಕೊಡುವ ಮಾತೇ ಇಲ್ಲ. ಪಕ್ಷ ಸಂಘಟನೆ ಮಾಡಿದ್ದೇನೆ. ನಾನು ಸ್ಥಳೀಯ ಹಾಗೂ ಪಕ್ಷಕ್ಕಾಗಿ ತ್ಯಾಗ ಮಾಡಿದ್ದೇನೆ. ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿಯಿಂದ ನಾನೇ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತೇನೆ' ಎಂದು ಹೇಳಿದರು.

ಮುನಿಸ್ವಾಮಿ ಬೆಂಬಲಿಗರು ಹಾಗೂ ಬಿ.ಪಿ.ವೆಂಕಟಮುನಿಯಪ್ಪ ಬೆಂಬಲಿಗರ ನಡುವೆ ಮಾತಿನ ಚಕಮಕಿ ಕೂಡ ನಡೆದಿದೆ. ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ನೇತೃತ್ವದಲ್ಲಿ ಮನವೊಲಿಸುವ ಯತ್ನ ನಡೆಯಿತಾದರೂ ಅವರ ನಿರ್ಗಮನದ ಬಳಿಕ ವಾಗ್ವಾದ ಶುರುವಾಗಿದೆ.

ಮೈತ್ರಿ ಧರ್ಮಪಾಲನೆಗಾಗಿ ಬಿಜೆಪಿ ಈ ಬಾರಿ ಕೋಲಾರ ಮೀಸಲು ಲೋಕಸಭೆ ಕ್ಷೇತ್ರವನ್ನು ಜೆಡಿಎಸ್‌ಗೆ ತ್ಯಾಗ ಮಾಡಿದೆ. ಹೀಗಾಗಿ, ಹಾಲಿ ಕ್ಷೇತ್ರವನ್ನು ಸಂಸದ ಮುನಿಸ್ವಾಮಿ ಕಳೆದುಕೊಂಡಿದ್ದಾರೆ. ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ಅವರು ಬಂಗಾರಪೇಟೆ ಮೀಸಲು ಕ್ಷೇತ್ರದಲ್ಲಿ ಸ್ಪರ್ಧಿಸುವ ಬಗ್ಗೆ ಈಗಲೇ ಚರ್ಚೆಗಳು ನಡೆಯುತ್ತಿವೆ.

ಆದರೆ, ಬಿ.ವಿ.ಮಹೇಶ್ ಅವರು ಕಳೆದ ವಿಧಾನಸಭೆ ಚುನಾವಣೆಯಲ್ಲಿ ಬಂಗಾರಪೇಟೆ ಬಿಜೆಪಿ ಟಿಕೆಟ್ ಆಕಾಂಕ್ಷಿಯಾಗಿದ್ದರು. ಆಗ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಮುನಿರತ್ನ ಸಂಧಾನದ ಬಳಿಕ ಎಂ.ನಾರಾಯಣಸ್ವಾಮಿ ಅವರಿಗೆ ಟಿಕೆಟ್ ನೀಡಲಾಗಿತ್ತು. ಅವರು ಪರಾಭವಗೊಂಡಿದ್ದರು.

# ಕಲಬುರಗಿ: ಮೊದಲ ದಿನ ಮೂರು ನಾಮಪತ್ರ ಸಲ್ಲಿಕೆ




ಕಲಬುರಗಿ: ಕಲಬುರಗಿ ಲೋಕಸಭಾ ಎಸ್‌ಸಿ ಮೀಸಲು ಕ್ಷೇತ್ರದ ಚುನಾವಣೆಗೆ ನಾಮಪತ್ರ ಸಲ್ಲಿಕೆ ಶುಕ್ರವಾರ ಆರಂಭವಾಗಿದ್ದು, ಮೊದಲ ದಿನ ಮೂರು ನಾಮಪತ್ರಗಳು ಸಲ್ಲಿಕೆಯಾಗಿವೆ.

ಕಾಂಗ್ರೆಸ್ ಅಭ್ಯರ್ಥಿ ರಾಧಾಕೃಷ್ಣ ದೊಡ್ಡಮನಿ, ಬಿಜೆಪಿ ಅಭ್ಯರ್ಥಿ ಡಾ.ಉಮೇಶ ಜಾಧವ ಹಾಗೂ ಸ್ವತಂತ್ರ ಅಭ್ಯರ್ಥಿ ತಾರಾಬಾಯಿ ಭೋವಿ ಅವರು ಉಮೇದುವಾ–ರಿಕೆಯನ್ನು ಚುನಾವಣಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವ–ರಿಗೆ ಸಲ್ಲಿಕೆ ಮಾಡಿದರು.

ರಾಧಾಕೃಷ್ಣ ಅವರು ಮೂರು ನಾಮಪತ್ರಗಳ ಪ್ರತಿಗಳನ್ನು ಸಲ್ಲಿಸಿದರು. ಮೊದಲ ಪ್ರತಿ ಸಲ್ಲಿಕೆಯ ವೇಳೆ ನಾಮಪತ್ರ ಪ್ರತಿ ಸಲ್ಲಿಕೆಯ ವೇಳೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ರಾಜ್ಯ ರೇಷ್ಮೆ ಉದ್ಯಮಗಳ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಕನೀಜ್ ಫಾತಿಮಾ, ಶಾಸಕ ಎಂ.ವೈ. ಪಾಟೀಲ ಹಾಗೂ ಮುಖಂಡ ಬಾಬುರಾವ ಚಿಂಚನಸೂರ ಉಪಸ್ಥಿತರಿದ್ದರು.

ನಾಮಪತ್ರ ಸಲ್ಲಿಕೆಗೂ ಮುನ್ನ ನಗರದ ಡಾ.ಬಿ.ಆರ್. ಅಂಬೇಡ್ಕರ್, ಬಸವೇಶ್ವರ ಹಾಗೂ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಮೂರ್ತಿಗಳಿಗೆ ಮಾಲಾರ್ಪಣೆ ಮಾಡಿದರು. ಬಳಿಕ ಶರಣಬಸವೇಶ್ವರರ ದೇವಸ್ಥಾನಕ್ಕೆ ತೆರಳಿ ಪೂಜೆ ಸಲ್ಲಿಸಿ, ಪ್ರಾರ್ಥನೆ ಮಾಡಿದರು.

ಬಿಜೆಪಿ ಅಭ್ಯರ್ಥಿ, ಸಂಸದ ಜಾಧವ ಅವರು ಮಾಜಿ ಶಾಸಕ ದತ್ತಾತ್ರೇಯ ಪಾಟೀಲ ರೇವೂರ, ಮುಖಂಡರಾದ ಶೋಭಾ ಭಾಣಿ, ಗುರುನಾಥ್ ಜಾಂತಿಕರ ಹಾಗೂ ಲಿಂಗರಾಜ ಬಿರಾದಾರ ಅವರೊಂದಿಗೆ ತೆರಳಿ ಸಾಂಕೇತಿಕವಾಗಿ ನಾಮಪತ್ರ ಸಲ್ಲಿಸಿದರು. ಏಪ್ರಿಲ್ 18ರಂದು ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ರಾಷ್ಟ್ರೀಯ ನಾಯಕರ ಸಮ್ಮುಖದಲ್ಲಿ ಮತ್ತೊಮ್ಮೆ ನಾಮಪತ್ರ ಸಲ್ಲಿಸುವರು.

ಸ್ವತಂತ್ರ ಅಭ್ಯರ್ಥಿ ತಾರಾಬಾಯಿ ಭೋವಿ ಅವರು ತಮ್ಮ ಬ೦ಬಲಿಗರೊ೦ದಿಗೆ ಉಮೇದುವಾರಿಕೆ ಸಲ್ಲಿಸಿದರು.

ವಾಹನ ದಟ್ಟಣೆ, ಹಾರ್ನ್ ಮಾಡಿ ಆಕ್ರೋಶ: ರಾಧಾಕೃಷ್ಣ ದೊಡ್ಡಮನಿ ಅವರ ನಾಮಪತ್ರ ಸಲ್ಲಿಕೆ ವೇಳೆ ಸಚಿವರು, ಶಾಸಕರು, ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿ ಮುಂಭಾಗದ ಎಸ್‌ವಿಪಿ ವೃತ್ತ? ಮಾರ್ಕೆಟ್ ರಸ್ತೆಯಲ್ಲಿ ನಿಂತಿದ್ದರಿಂದ ವಾಹನ ದಟ್ಟಣೆ ಕಂಡುಬಂತು. ಬಿಸಿಲಿನ ಝಳಕ್ಕೆ ಬೇಸತ್ತ ವಾಹನಗಳ ಚಾಲಕರು ನಿರಂತರವಾಗಿ ಹಾರ್ನ್ ಮಾಡುವ ಮೂಲಕ ಆಕ್ರೋಶ ವ್ಯಕ್ತಪಡಿಸಿದ್ದರು. ಸಂಚಾರ ದಟ್ಟಣೆ ನಿಯಂತ್ರಿಸುವ ಬದಲು ಬಹುತೇಕ ಪೊಲೀಸರು ಜನಪ್ರತಿನಿಧಿಗಳ ಸುತ್ತ ಸುತ್ತುವರಿದಿದ್ದರು. ಹಾರ್ನ್ ಶಬ್ಧ ಜೋರಾಗುತ್ತಿದ್ದಂತೆ, ರಸ್ತೆಯಲ್ಲಿ ನಿಂತಿದ್ದ ಕೆಲವರನ್ನು ಬದಿಗೆ ಸರಿಸಿ ವಾಹನ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

ನಾಮಪತ್ರ ಸಲ್ಲಿಕೆ ಮಾಡಿ ಹೊರ ಬರುವವರೆಗೂ ಸುಮಾರು 40 ನಿಮಿಷಗಳ ಕಾಲ ರಸ್ತೆಯಲ್ಲಿ ಎಲ್ಲೆಂದರಲ್ಲಿ ನಿಂತಿದ್ದ ಕಾರುಗಳು, ಕಾರ್ಯಕರ್ತರ ನಡುವಿನಿಂದ ನುಸುಳಿಕೊಂಡು ವಾಹನ ಸವಾರರು ಸಂಚರಿಸಿದರು. ಲಾಹೋಟಿ ಪೆಟ್ರೋಲ್ ಬಂಕ್ ಸಮೀಪ ಬ್ಯಾರಿಕೇಡ್ ಹಾಕಿದ್ದ ಪೊಲೀಸರು, ವಾಹನಗಳ ಸಂಚಾರಕ್ಕೆ ತಡೆಯೊಡ್ಡಿ, ಬದಲಿ ರಸ್ತೆಯಲ್ಲಿ ಹೋಗುವಂತೆ ಸೂಚಿಸಿದ್ದರು.

'ಎರಡು ರಸ್ತೆಗಳು ಬಂದ್ ಮಾಡುವ ಬದಲು ಒಂದು ರಸ್ತೆಯಲ್ಲಾದರು ಓಡಾಟಕ್ಕೆ ಅವಕಾಶ ಮಾಡಿಕೊಡಬೇಕಿತ್ತು' ಎಂದು ಬೈಕ್, ಆಟೊ ಚಾಲಕರು ಆಕ್ರೋಶ ಹೊರಹಾಕಿದರು.

# ಅಂಬೇಡ್ಕರ್ ಜಯಂತಿ



ಮಹಾಲಿಂಗಪುರ: ಪಟ್ಟಣದ ಅಂಬೇಡ್ಕರ ವೃತ್ತದಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಯಿತು. ಕಾಂಗ್ರೆಸ್ ಮುಖಂಡ ಸಿದ್ದು ಕೊಣ್ಣೂರ, ದಲಿತ ಸಂಘಟನೆಗಳ ಮುಖಂಡರು ಇದ್ದರು.

# ಕೆಂಗೇರಿಮಡ್ಡಿಯಲ್ಲಿ ಅಂಬೇಡ್ಕರ್ ಜಯಂತಿ



ಮಹಾಲಿಂಗಪುರ: ಪಟ್ಟಣದ ಕೆಂಗೇರಿಮಡ್ಡಿಯಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಯಿತು. ಕಾಂಗ್ರೆಸ್ ಮುಖಂಡ ಸಿದ್ದು ಕೊಣ್ಣೂರ, ದಲಿತ ಸಂಘಟನೆ ಮುಖಂಡ ಶ್ರೀಶೈಲ ದೊಡಮನಿ, ಫಾರುಖ ಪಕಾಲಿ, ದುಂಡಪ್ಪ ಪಟ್ಟಣಶೆಟ್ಟಿ ಸೇರಿದಂತೆ ಹಲವರು ಇದ್ದರು.

# ಪುರಸಭೆಯಲ್ಲಿ ಅಂಬೇಡ್ಕರ ಜಯಂತಿ



ಮಹಾಲಿಂಗಪುರ: ರವಿವಾರ ಸ್ಥಳೀಯ ಆಡಳಿತ ಕಛೇರಿ ಪುರಸಭೆಯಲ್ಲಿ ಸಂವಿಧಾನ ಶಿಲ್ಪಿ ಡಾ।ಬಿ.ಆರ್.ಅಂಬೇಡ್ಕರ್ ಅವರ 133ನೇ ಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಪುರಸಭೆಯ ಮುಖ್ಯಾಧಿಕಾರಿ ಈರಣ್ಣ ದಡ್ಡಿ ಅವರು ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿ ಅಂಬೇಡ್ಕರ ಅವರ ಜೀವನ ಸಾಧನೆಯು ಅಮೋಘವಾಗಿದ್ದು. ಸಮಾನತೆಯ ಸಮಾಜ ನಿರ್ಮಾಣಕ್ಕೆ ಶ್ರಮಿಸಿದ ಅಂಬೇಡ್ಕರ್ ಅವರ ತತ್ವ ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಜಯಂತಿ ಆಚರಣೆಗಳು ಸಾರ್ಥಕವಾಗುತ್ತವೆ ಎಂದರು.

ಪುರಸಭೆ ಅಕಾರಿಗಳಾದ ಎಸ್.ಎನ್. ಪಾಟೀಲ, ವ್ಹಿ.ಜಿ.ಕುಲಕರ್ಣಿ, ಸಿ.ಎಸ್. ಮಠಪತಿ, ರಾಜು ಹೂಗಾರ, ಸಿದ್ದು ಅಳ್ಳಿಮಟ್ಟಿ, ಬಿ.ವೈ. ಮರದಿ, ಮಹಾಲಿಂಗ ಮೂಗಳಖೋಡ, ಸಿಬ್ಬಂದಿ ರಾಜೇಶ್ವರಿ ಸೋರಗಾಂವಿ, ಚನ್ನಮ್ಮ ಪಟ್ಟಣಶೆಟ್ಟಿ, ಪ್ರೀತಿ ಹಲಕುಂದ, ಮಂಜುಳಾ ಬಂಡಿವಡ್ಡರ, ಎಂ.ಕೆ.ದಳವಾಯಿ, ರವಿ ಹಲಸಪ್ಪಗೋಳ, ದುರ್ಗಪ್ಪ ಜಮಖಂಡಿ, ರಾಮು ಮಾಂಗ, ಮಹಾಲಿಂಗ ಮಾಂಗ, ಎಂ.ಡಿ.ಮಹಾಲಿಂಗ, ಮಹಾಲಿಂಗ ಗಸ್ತಿ ಸೇರಿದಂತೆ ಪುರಸಭೆ ಸಿಬ್ಬಂದಿ ಹಾಗೂ ದಲಿತ ಸಂಘಟನೆಗಳ ಹಿರಿಯರು, ಯುವಕರು ಇದ್ದರು.

## ಡಾ. ಬಾಬಾಸಾಹೇಬರ ತತ್ವ ಆದರ್ಶಗಳನ್ನು

# ನಾವೆಲ್ಲರೂ ಅಳವಡಿಸಿಕೊಳ್ಳೋಣ ; ಡಾ. ಪಿ ಬಿ ಕೊರವಿ



ರಾಯಬಾಗ :: ಸಂವಿಧಾನ ಶಿಲ್ಪಿ ಡಾ. ಬಿ.ಆರ್ ಅಂಬೇಡ್ಕರ ಅವರು ಅಪಾರ ಜ್ಞಾನ ಭಂಡಾರವನ್ನು ಹೊಂದಿದ್ದು, ನಮ್ಮ ದೇಶಕ್ಕೆ ಸಂವಿಧಾನವನ್ನು ರಚಿಸುವ ಮೂಲಕ ನಮಗೆಲ್ಲ ದಾರಿ ದೀಪ ಆಗಿದ್ದಾರೆ. ದಿವ್ಯ ಜ್ಞಾನ ಹೊಂದಿದ ವ್ಯಕ್ತಿತ್ವವನ್ನು ನಾವು ಇವರಲ್ಲಿ ಕಾಣಬಹುದು.ಬಾಬಾಸಾಹೇಬರ ಇಂತಹ ದಿವ್ಯ ಆದರ್ಶಗಳನ್ನು ನಾವೆಲ್ಲರೂ ಅಳವಡಿಸಿಕೊಂಡು ಮುನ್ನಡೆಯೋಣ ಎಂದು ಡಾ.ಪಿ .ಬಿ ಕೊರವಿ ಹೇಳಿದರು.

ಅವರು ತಾಲ್ಲೂಕಿನ ಮುಗಳಖೋಡ ಪಟ್ಟಣದ ಪ್ರತಿಷ್ಠಿತ ಡಾ. ಸಿ ಬಿ ಕುಲಿಗೋಡ ಪದವಿ ಮಹಾವಿದ್ಯಾಲಯದ ಎನ್ ಎಸ್ ಎಸ್ ಘಟಕ ಹಾಗೂ ಯುವ ರೇಡ್ ಕ್ರಾಸ್ ಘಟಕದ ಆಶ್ರಯದಲ್ಲಿ ಏರ್ಪಡಿಸಿದ ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ. ಬಿ ಆರ್ ಅಂಬೇಡ್ಕರ್ ಅವರ 133ನೇ ಜಯಂತಿಯ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ಕೆ ಪಿ ಹಾಲಳ್ಳಿ ಹಾಗೂ ಪಿ.ಎ. ನಾಯಕ ಡಾ ಅಂಬೇಡ್ಕರ್ ಭಾವಚಿತ್ರದ ಪೂಜಾ ಕಾರ್ಯಕ್ರಮ ನೆರವೇರಿಸಿ ನಮಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಚಾರ್ಯರಾದ ಪ್ರೊ. ಪ್ರಕಾಶ ಕಂಬಾರ ಅವರು ವಹಿಸಿದ್ದರು. ಈ ಸಂದರ್ಭದಲ್ಲಿ ಕೆ ಪಿ ಹಾಲಳ್ಳಿ ಎಚ್.ಎಮ್ ಕಂಕನವಾಡಿ, ಪಿ ಎ ನಾಯಕ, ಎಸ್ ಆರ್ ತೇಲಿ, ಎಸ್ ಬಿ ಮಸರಗುಪ್ಪಿ, ಎಲ್. ಕೆ. ಕರೀಭಿಮಗೋಳ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

**ವರದಿ: ಡಾ. ಜಯವೀರ ಎ.ಕೆ. ಖೇಮಲಾಪುರ**

# ತುಳಿತಕ್ಕೆ ಒಳಗಾದವರ ಬಾಳಿಗೆ ಬೆಳಕಾದವರು



ರಬಕವಿ–ಬನಹಟ್ಟಿ: ಡಾ. ಅಂಬೇಡ್ಕರ್ ಅವರೊಬ್ಬ ಅವತಾರಿ ಪುರುಷರಾಗಿದ್ದು, ಭಾರತ ದೇಶದಲ್ಲಿ ತುಳಿತಕ್ಕೆ ಒಳಗಾದ ಸಮುದಾಯಗಳ ಬಾಳಿಗೆ ಬೆಳಕನ್ನು ನೀಡಿದವರು ಎಂದು ಶಾಸಕ ಸಿದ್ದೂ ಸವದಿ ತಿಳಿಸಿದರು.

ಭಾನುವಾರ ಬನಹಟ್ಟಿಯ ಬಿಜೆಪಿ ಕಾರ್ಯಾ9ಲಯದಲ್ಲಿ ಡಾ. ಬಾಬಾಸಾಹೇಬ ಅಂಬೇಡ್ಕರ್ ಜಯಂತ್ಯೋತ್ಸವದ ಅಂಗವಾಗಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು. ಅವರೊಬ್ಬ ಶ್ರೇಷ್ಠ ಓದುಗರಾಗಿದ್ದರು. ಮಹಾನ್ ಚಿಂತನ ಶೀಲ ವ್ಯಕ್ತಿಗಳಾಗಿದ್ದರು. ದೇಶದ ಹಿಂದುಳಿದ ಎಲ್ಲ ಸ ವ ು ದಾ ಂ ು ಗ ಳಿ ಗ ೂ ಸಮಾನತೆಯನ್ನು ನೀಡುವಲ್ಲಿ ಶ್ರಮಿಸಿದ ಮಹಾನ್ ವ್ಯಕ್ತಿಯಾಗಿದ್ದರು. ದೇಶದ ಅಭಿವೃದ್ಧಿಯಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ ಎಂದು ಶಾಸಕ ಸವದಿ ತಿಳಿಸಿದರು.

ಈ ಸಂದರ್ಭದಲ್ಲಿ ಧರೆಪ್ಪ ಉಳ್ಳಾಗಡ್ಡಿ, ಸುರೇಶ ಅಕ್ಕಿವಾಟ, ಶ್ರೀಶೈಲ ಬೀಳಗಿ, ತಿಪ್ಪಣ್ಣ ಬಸಪ್ಪಗೋಳ, ಶ್ರೀಧರ ದೊಡ್ಡಮನಿ, ಗುರು ಶೀಲವಂತ, ಅಶೋಕ ರಾವಳ, ಶಿವಾನಂದ ಕಾಗಿ, ಈಶ್ವರ ಕಾಡದೇವರ, ಸುಧೀರ ನಡುವಿಮನಿ, ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಚಿತ್ರ ಶೀರ್ಷಿಕೆ ರಬಕವಿ–ಬನಹಟ್ಟಿ : ರಬಕವಿ ಬನಹಟ್ಟಿ ಬಿಜೆಪಿ ಕಾರ್ಯಾಲಯದಲ್ಲಿ ನಡೆದ ಡಾ. ಅಂಬೇಡ್ಕರ್ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಶಾಸಕ ಸಿದ್ದೂ ಸವದಿ ಅಂಬೇಡ್ಕರ್ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.

# ಭಾವೈಕ್ಯತೆಯನ್ನು ಸಾರುವ ಕಂಬಿ ಮಲ್ಲಯ್ಯನ ಆಗಮನ



ಬನಹಟ್ಟಿ: ಇಲ್ಲಿ ಭಾನುವಾರ ಮಲ್ಲಯ್ಯ ದೇವರ ಕಂಬಿಗಳನ್ನು ಕರೆದುಕೊಳ್ಳುವ ಕಾರ್ಯಕ್ರಮವನ್ನು ಸಂಭ್ರಮ ಸಡಗರದಿಂದ ಆಚರಿಸಲಾಯಿತು. ಶ್ರೀಶೈಲಕ್ಕೆ ಹೋದ ಕಂಬಿಗಳನ್ನು ಬೆಳಿಗ್ಗೆ ಮೆರವಣಿಗೆಯ ಮೂಲಕ ಬನಹಟ್ಟಿಯ ಮಲ್ಲಿಕಾರ್ಜುನ ಚಿತ್ರ ಮಂದಿರದ ಹತ್ತಿರದ ಅರಳಿಗಿಡದ ಕಟ್ಟೆಯ ಮೇಲೆ ತಂದು ಪ್ರತಿಷ್ಠಾಪಿಸಲಾಯಿತು. ನಂತರ ಬೆಳಿಗ್ಗೆ ಹತ್ತಕ್ಕೆ ಊರಿನ ಮತ್ತು ಸೋಮವಾರ ಪೇಟೆ ಸಮಸ್ತ ದೈವ ಮಂಡಳಿಯ ಹಿರಿಯರು ಕೂಡಿಕೊಂಡು ಸಾಮೂಹಿಕವಾಗಿ ಮಂಗಳಾರು ತಿಯನ್ನು ಮಾಡಿದ ನಂತರ ಮಹಿಳೆಯರು ಕಂಬಿಗಳಿಗೆ ಆರತಿಯನ್ನು ಮಾಡಿ ನೈವೇದ್ಯ ಸಲ್ಲಿಸಿದರು.

ಈ ಕಾರ್ಯಕ್ರಮಕ್ಕೆ ಗಂಡು ಮಕ್ಕಳು ದಿವಟಿಗೆಗಳನ್ನು ಮತ್ತು ಹೆಣ್ಣು ಮಕ್ಕಳು ಆರತಿಯನ್ನು ತೆಗೆದುಕೊಂಡು ಬರುವುದು ವಿಶೇಷವಾಗಿರುತ್ತದೆ. ಈ ಸಂದರ್ಭದಲ್ಲಿ ದೇವರಿಗೆ ಹಸಿ ಕಡಲೆ, ಶ್ಯಾವಿಗೆ ಮತ್ತು ಬೆಲ್ಲದ ನೈವೇದ್ಯವನ್ನು ಅರ್ಪಿಸಲಾಯಿತು. ನಂತರ ಹೆಣ್ಣು ಮಕ್ಕಳು ನಗರದ ಮಲ್ಲಿಕಾರ್ಜುನ ದೇವಸ್ಥಾನಕ್ಕೆ ತೆರಳಿ ಅಲ್ಲಿ ನೈವೇದ್ಯವನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಹಾಂತಯ್ಯ ಹಿರೇಮಠ, ಸಿದ್ದನಗೌಡ ಪಾಟೀಲ, ಮಲ್ಲಿಕಾರ್ಜುನ ತುಂಗಳ, ಮಹಾಶಾಂತ ಶೆಟ್ಟರ, ಮಲ್ಲಿಕಾರ್ಜುನ ಬಾವಲತ್ತಿ, ಕಿರಣ ಆಳಗಿ, ವಿವೇಕ ಕೊಳಕಿ, ಮಲ್ಲು ಬುಟ್ಟನವರ, ಚೆನ್ನಪ್ಪ ಗುಣಕಿ, ಶಿವಕುಮಾರ ಬಾಗೇವಾಡಿ, ಶಿವಕುಮಾರ ಗಣೇಶನವರ, ರಾಜು ಲುಕ್ಕ, ರಾಜು ಕುಲಕರ್ಣಿ, ರಾಚಯ್ಯ ಮಠಪತಿ, ಚನಬಸಯ್ಯ ಮಠಪತಿ, ಕಲ್ಲಯ್ಯ ಮಠಪತಿ, ರೇವಪ್ಪ ಗುಣಕಿ, ಶಿವು ಗುಂಡಿ, ಸಂಜಯ ಕೊಂತಿ, ಬಸವರಾಜ ಅಮಟಿ, ಸಂಜಯ ಕಕಮರಿ, ಗಂಗಾಧರ ಪಿರಂಗಿ, ಮಲ್ಲಪ್ಪ ಹೂಲಿ, ರವಿ ಕರಲಟ್ಟಿ, ಮಹಾದೇವ ಶಿರಹಟ್ಟಿ, ಈರಣ್ಣ ಜಿಗಜಿನ್ನಿ, ಪಂಡಿತ ಪಟ್ಟಣ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

# ಮಹಿಳಾ ಸಾಹಿತ್ಯ ಸಮಾವೇಶ

ಧಾರವಾಡ : ಸೃಜನಶೀಲ ಸಾಹಿತ್ಯ ಭಾವನೆಗಳ ಅಭಿವ್ಯಕ್ತಿಗೆ ಸಾಧನವಾಗಿದೆ. ಜಾನಪದ ಗರತಿಯರಲ್ಲಿ ಆಗಾಧವಾದ ಸೃಜನಶೀಲತೆ ಇತ್ತು ಎಂದು ಬೆಳಗಾವಿಯ ವಿಮರ್ಶಕಿ ಹಾಗೂ ಚಿಂತಕರಾದ ಡಾ. ಮೈತ್ರೇಯಿಣಿ ಗದಿಗೆಪ್ಪಗೌಡರ ಅಭಿಪ್ರಾಯಪಟ್ಟರು.

ಅವರು ಕರ್ನಾಟಕ ವಿದ್ಯಾವರ್ಧಕ ಸಂಘವು, ಸುವರ್ಣ ಕರ್ನಾಟಕ ಸಂಭ್ರಮದ ನಿಮಿತ್ತ ಆಯೋಜಿಸಿದ್ದ ಮಹಿಳಾ ಸಾಹಿತ್ಯ ಸಮಾವೇಶ ಕಾರ್ಯಕ್ರಮದಲ್ಲಿಸೃಜನ ಹಾಗೂ ಸೃಜನೇತರ ಸಾಹಿತ್ಯ' ಕುರಿತ ಸಾಹಿತ್ಯ ಗೋಷ್ಠಿಯಲ್ಲಿ ಮಾತನಾಡಿದರು.

ಸೃಜನಶೀಲ ಸಾಹಿತ್ಯ ಬುದ್ಧಿ–ಭಾವದ ಪ್ರಧಾನವಾದರೆ ಸೃಜನೇತರ ಸಾಹಿತ್ಯವೆಲ್ಲ ಜ್ಞಾನದ ಪ್ರಧಾನವಾಗಿವೆ. ಕಥೆ, ಕಾದಂಬರಿ, ನಾಟಕ, ಕಾವ್ಯಗಳು ಸೃಜನಶೀಲವಾದರೆ, ತರ್ಕಶಾಸ್ತ್ರ ವಿಮರ್ಶೆ, ವಿಜ್ಞಾನ–ತಂತ್ರಜ್ಞಾನ ಸಂಶೋಧನಾ ಶಾಸ್ತ್ರ, ಮಾನಸಿಕ ಶಾಸ್ತ್ರ ಹಾಗೂ ಶಾಸನ ಸಂಶೋಧನೆಗಳು ಸೃಜನೇತರ ಸಾಹಿತ್ಯವಾಗಿವೆ. ಉತ್ತರಕರ್ನಾಟಕದಲ್ಲಿ ಸೃಜನೇತರ ಸಾಹಿತ್ಯಕ್ಕೆಡಾ. ಹನುಮಾಕ್ಷಿ ಗೋಗಿ ಹಾಗೂ ರಾಯಚೂರಿನಕವಿತಾ ಮಿಶ್ರಾರ ಕೊಡುಗೆ ಅನನ್ಯವಾದದ್ದು. ಸೃಜನೇತರ ಸಾಹಿತ್ಯಕ್ಕೂ ವಿಫುಲ ಅವಕಾಶ ಲಭ್ಯವಾಗಬೇಕೆಂದು ಹೇಳಿದರು.

ವಿದ್ಯಾರಣ್ಯ ಪ.ಪೂ. ಮಹಾವಿದ್ಯಾಲಯದ ಪ್ರಾಚಾರ್ಯೆಡಾ.ಶರಣಮ್ಮ ಗೋರೇಬಾಳ ಮಹಿಳೆ ಮತ್ತು ಸಾಹಿತ್ಯಕುರಿತು ಮಾತನಾಡಿ, ಮಹಿಳೆ ಎಂದರೇನೇ ಸಾಹಿತ್ಯ.ತ್ಯಾಗ, ಕರುಣೆ, ಪ್ರೀತಿ, ವಾತ್ಸಲ್ಯದ ಮಹಿಳೆ ತನ್ನ ಭಾವನೆಗಳನ್ನು ಸಾಹಿತ್ಯದ ಮೂಲಕ ವ್ಯಕ್ತಪಡಿಸುತ್ತಿದ್ದಳು. 12 ನೇ ಶತಮಾನದಲ್ಲಿ 33 ಜನ ಮಹಿಳಾ ವಚನಗಾರ್ತಿಯರುಜೀವನಮುಖಿ ಕಾಳ–ಜಿಯೊಂದಿಗೆ ವಚನ ಸಾಹಿತ್ಯರಚಿಸುತ್ತಿದ್ದರು. ಇಂದುಮಹಿಳೆಯರಿಗೆವಿಫುಲಅವಕಾಶಗಳಿದ್ದು ಸಾಹಿತ್ಯರಚನೆಯಲ್ಲಿ ಮುಂದಾಗಬೇಕು. ಮಹಿಳೆಯರನ್ನು ಎರಡನೇದರ್ಜೆ ಪೌರರಂತೆಕಾಣುವದು ಸರಿಯಲ್ಲಎಂದರು.

ಅಧ್ಯಕ್ಷತೆ ವಹಿಸಿದ್ದ ಹಿರಿಯ ಶಾಸನ ಶಾಸ್ತ್ರ ಸಂಶೋಧಕಿ ಹನುಮಾಕ್ಷಿ ಗೋಗಿ ಮಾತನಾಡಿ, ಸೃಜನ, ಸೃಜನೇತರ ಸಾಹಿತ್ಯದ ವ್ಯಾಪ್ತಿ ವಿಸ್ತಾರವಾಗಿದೆ.ಇದಕ್ಕೆ ಸಮಯದ ಮಿತಿಇರಲಾರದು.ಇಂದು ಮಹಿಳಾ ಸಾಹಿತ್ಯಜಾತಿಗುಂಪುಗಾರಿಕೆ ಮೀರಿ ಬೆಳೆಯುತ್ತಿದೆ ಎಂದು ಹೇಳಿದರು.

ವೇದಿಕೆಯಲ್ಲಿ ವಿಶ್ವೇಶ್ವರಿ ಹಿರೇಮಠಇದ್ದರು, ಶಂಕರ ಹಲಗತ್ತಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರ, ಡಾ.ಮಹೇಶ ಹೊರಕೇರಿ ನಿರೂಪಿಸಿದರು.ವೀರಣ್ಣಒಡ್ಡೀನ ವಂದಿಸಿದರು. ಕಾರ್ಯಕ್ರಮದಲ್ಲಿ ಪ್ರೊ.ಮಾಲತಿಪಟ್ಟಣಶೆಟ್ಟಿ,ಡಾ.ಮಲ್ಲಿಕಾಘಂಟಿ, ಪ್ರೊ. ಶಾಂತಾಇಮ್ರಾಪೂರ, ರಾಧಾ ಶ್ಯಾಮರಾವ, ಪ್ರಭಾ ನೀರಲಗಿ, ವಿಜಯಲಕ್ಷ್ಮಿಕಲ್ಯಾಣಶೆಟ್ಟರ ಹಾಗೂ ಶಿವಾನಂದ ಭಾವಿಕಟ್ಟಿ,ವಿವಿಧಕಾಲೇಜಿನ ಸುಮಾರು 50ಕ್ಕೂ ಹೆಚ್ಚುವಿದ್ಯಾರ್ಥಿನಿಯರು ಸೇರಿದಂತೆಅನೇಕರು ಪಾಲ್ಗೊಂಡಿದ್ದರು.




## 500 ವರ್ಷಗಳ ಕನಸು ನನಸಾಗಿಸಿದ ಮೋದಿ– ಅಣ್ಣಾಸಾಹೇಬ ಜೊಲ್ಲೆ



ಅಥಣಿ: 'ಜಾತಿ? ಮತದ ವಿಷಬೀಜ ಬಿತ್ತುವ ಮೂಲಕ ಕಾಂಗ್ರೆಸ್ ಸಮಾಜ ಒಡೆಯುವ ಕೆಲಸ ಮಾಡುತ್ತಿದೆ. ಇದಕ್ಕೆ ಈ ಚುನಾವಣೆಯಲ್ಲಿ ಬುದ್ಧಿ ಕಲಿಸಬೇಕು' ಎಂದು ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆ ಹೇಳಿದರು.

ಪಟ್ಟಣದಲ್ಲಿ ಗುರುವಾರ ನಡೆದ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ ಅವರು, 'ಪ್ರಧಾನಿ ನರೇಂದ್ರ ಮೋದಿ ಪವಾಡ ಪುರುಷ ಇದ್ದಂತೆ. 500 ವರ್ಷಗಳಿಂದ ಲಕ್ಷಾಂತರ ಕರಸೇವಕರು ಪ್ರಾಣ ಬಿಟ್ಟಿದ್ದು ರಾಮ ಮಂದಿರಕ್ಕಾಗಿ. ಎಲ್ಲ ಅಡೆತಡೆಗಳನ್ನು ಮೀರಿ ಮೋದಿ ಅವರು ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ ಮಾಡಿದರು' ಎಂದರು.

'ಕಳೆದ ಚುನಾವಣೆಯಲ್ಲಿ ಅಥಣಿ ಮತಕ್ಷೇತ್ರದಿಂದ ನನಗೆ 1.11 ಲಕ್ಷ ಮತಗಳ ಲೀಡ್ ಸಿಕ್ಕಿದೆ. ಈ ಚುನಾವಣೆಯಲ್ಲಿಯೂ ಆಶೀರ್ವಾದ ಮಾಡಬೇಕು' ಎಂದು ಮನವಿ ಮಾಡಿದರು. 'ಅಥಣಿ ಕ್ಷೇತ್ರದಲ್ಲಿ ಪಿ.ಎಂ.ಜಿ.ಎಸ್.ವೈ ಯೋಜನೆಯಡಿ ?25 ಕೋಟಿ ಅನುದಾನದಲ್ಲಿ ಗ್ರಾಮೀಣ ರಸ್ತೆಗಳ ಅಭಿವೃದ್ಧಿ, ಲೋಕೋಪಯೋಗಿ ಇಲಾಖೆ ಮೂಲಕ ರಸ್ತೆ ನಿರ್ಮಾಣಕ್ಕೆ ಅನುದಾನ, ?2.97 ಕೋಟಿ ಅನುದಾನದಲ್ಲಿ ಆಂಬುಲೆನ್ಸ್, ಸಿಸಿಟಿವಿ ಕ್ಯಾಮೆರಾ ಅಳವಡಿಕೆ, ಬಸ್ ಶೆಲ್ಟರ್, ಸಮುದಾಯ ಭವನ ನಿರ್ಮಾಣ ಮಾಡಿದ್ದೇನೆ. ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿಗಾಗಿ ?4,480 ಕೋಟಿ ಅನುದಾನ ಮಂಜೂರು ಮಾಡಿಸಿದ್ದೇನೆ. ಝುಂಜರವಾಡದಲ್ಲಿ ?1 ಕೋಟಿ ಅನುದಾನದಲ್ಲಿ ರಸ್ತೆ ಕಾಮಗಾರಿ ಕೈಗೊಂಡಿದ್ದೇನೆ' ಎಂದು ವಿವರಿಸಿದರು.

ಮಾಜಿ ಶಾಸಕ ಮಹೇಶ ಕುಮಠಳ್ಳಿ ಮಾತನಾಡಿ, 'ಅಣ್ಣಾಸಾಹೇಬ ಜೊಲ್ಲೆ ಅವರು ಕ್ಷೇತ್ರದಲ್ಲಿ ಸಾಕಷ್ಟು ಜನಪರ ಕಾರ್ಯಕ್ರಮ ಅನುಷ್ಠಾನ ಗೊಳಿಸಿದ್ದಾರೆ. ಶಾಸಕ ರಮೇಶ ಜಾರಕಿಹೊಳಿ ಸಹಕಾರದಿಂದ ಸುಮಾರು ?1,400 ಕೋಟಿ ಅನುದಾನದ ಅಮ್ಮಾಜೇಶ್ವರಿ ನೀರಾವರಿ ಯೋಜನೆ ನನ್ನ ಅಧಿಕಾರ ಅವಧಿಯಲ್ಲಿಯೇ ಮಂಜೂರಾಗಿದೆ. ಅಥಣಿ ಮತಕ್ಷೇತ್ರದಲ್ಲಿ ಎಲ್ಲ ಗ್ರಾಮಗಳಿಗೂ ರಸ್ತೆ, ಬಾಂದಾರ, ತಡೆಗೋಡೆ ನಿರ್ಮಿಸಲಾಗಿದೆ. ಈ ಅಭಿವೃದ್ಧಿ ನೋಡಿ ಮತ ನೀಡಿ' ಎಂದರು.

ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಸತೀಶ ಅಪ್ಪಾ–ಜಿಗೊಳ, ಜಿಲ್ಲಾ ಸಂಚಾಲಕ ರಾಜೇಶ ನೇರ್ಲಿ, ಜಿಲ್ಲಾ ವಿಭಾಗೀಯ ಪ್ರಭಾರಿ ಚಂದ್ರಶೇಖರ ಕವಟಗಿ, ಮಂಡಳ ಅಧ್ಯಕ್ಷ ರವಿ ಸಂಕ, ಜಿಲ್ಲಾ ಕಾರ್ಯದರ್ಶಿ ಪ್ರಭಾಕರ ಚವ್ಹಾಣ , ಮುಖಂಡರಾದ ಧರೆಪ್ಪ ಠಕ್ಕಣ್ಣವರ, ಸಿದ್ದಪ್ಪ ಮುದಕಣ್ಣವರ, ಅಪ್ಪಾಸಾಬ್ ಅವತಾಡೆ, ಸತ್ಯಪ್ಪ ಬಾಗೆನ್ನವರ, ಜಿನಗೌಡ ಪಾಟೀಲ, ಗಿರೀಶ ಬುಟಾಳಿ, ರವಿ ಪೂಜಾರಿ, ಅಭಜೀತ್ ಕೊಡಗ ಇತರರು ಇದ್ದರು.

## ಅಫಜಲಪುರ ಮುಖ್ಯಮಂತ್ರಿ ಆಗಿ ದೇವಸ್ಥಾನಕ್ಕೆ ಬರುತ್ತೇನೆ: ಡಿಕೆಶಿ



ಅಫಜಲಪುರ (ಕಲಬುರಗಿ ಜಿಲ್ಲೆ): 'ಈ ಭಾಗದಲ್ಲಿ ದೇವಲ ಗಾಣಗಾಪುರ ದತ್ತ ಮಹಾರಾಜರ ದೇವಸ್ಥಾನ ಪವಿತ್ರವಾಗಿದ್ದು, ಅಪಾರ ಭಕ್ತರನ್ನು ಹೊಂದಿದ್ದಾರೆ. ಅದಕ್ಕಾಗಿ ಈ ದೇವಸ್ಥಾನವನ್ನು ಅಭಿವೃದ್ಧಿ ಮಾಡಲಾಗುವುದು, ತಾವೆಲ್ಲಾ ಅರ್ಚಕರು ನಾನು ಮುಖ್ಯಮಂತ್ರಿ ಆಗಿ ಬರಬೇಕೆಂದು ಆಶೀರ್ವಾದ ನೀಡಿ ಸನ್ಮಾನ ಮಾಡಿದ್ದೀರಿ. ಅದಕ್ಕೆ ದತ್ತಾತ್ರೇಯ ಮಹಾರಾಜರ ಆಶೀರ್ವಾದ'ದಿಂದ' ಮುಖ್ಯಮಂತ್ರಿಯಾದರೆ ಮತ್ತೊಮ್ಮೆದೇವಸ್ಥಾನಕ್ಕೆಬರುತ್ತೇನೆ' ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.

ದೇವಲ ಗಾಣಗಾಪುರದ ದತ್ತಾತ್ರೇಯ ಮಹಾರಾಜರ ದೇವಸ್ಥಾನಕ್ಕೆ ಶುಕ್ರವಾರ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ ಅವರನ್ನು ಸನ್ಮಾನಿಸಿದ ಅರ್ಚಕರು ಮತ್ತೊಮ್ಮೆ ದೇವಲ ಗಾಣಗಾಪುರಕ್ಕೆ ಮುಖ್ಯಮಂತ್ರಿಯಾಗಿ ಬರಬೇಕು. ತಮಗೆದತ್ತಾತ್ರೇಯಮಹಾರಾಜರ ಆಶೀರ್ವಾದವಿದೆ ಎಂದರು.

ಪೂಜಾ ಕೈಂಕರ್ಯವನ್ನು ಅರ್ಚಕರಾದ ಉದಯ ಭಟ್ ಪೂಜಾರಿ, ಪ್ರಸನ್ನ ಪಿ. ಪೂಜಾರಿ, ಗಂಗಾಧರ್ ಎಸ್.ಪೂಜಾರಿ, ಪ್ರಫುಲ್ ಪಿ.ಪೂಜಾರಿ, ದೇವಿದಾಸ್ ಎ.ಪೂಜಾರಿ ನೆರವೇರಿಸಿದರು.

## ಎಸ್ ಯುಸಿಐ ಕಮ್ಯುನಿಸ್ಟ್ ಪಕ್ಷದ ಅಭ್ಯರ್ಥಿ ನಾಗಜ್ಯೋತಿ ನಾಮಪತ್ರ ಸಲ್ಲಿಕೆ




ವಿಜಯಪುರ: ಎಸ್ ಯುಸಿಐ ಕಮ್ಯುನಿಸ್ಟ್ ಪಕ್ಷದ ಲೋಕಸಭಾ ಅಭ್ಯರ್ಥಿ ನಾಗಜ್ಯೋತಿ. ಬಿ. ಎನ್ ಶುಕ್ರವಾರ ನಾಮಪತ್ರ ಸಲ್ಲಿಸಿದರು.

ನಾಗಜ್ಯೋತಿ ಮಾತನಾಡಿ, ಜನರ ಕೆಂಗಣ್ಣಿಗೆ ಗುರಿಯಾಗುವ ಬಂಡವಾಳಶಾಹಿ ಪಕ್ಷಗಳು ಹೊಸ ಮುಖಗಳೊಂದಿಗೆ, ಹೊಸ ಗ್ಯಾರಂಟಿಗಳೊಂದಿಗೆ ಮತ್ತೆ ಜನರ ಬಳಿಗೆ ಬರುತ್ತಿವೆ. ಇನ್ನೊಂದೆಡೆ ಕೇಂದ್ರದಲ್ಲಿ ಕಳೆದ 10 ವರ್ಷಗಳಿಂದ ಅಧಿಕಾರದಲ್ಲಿರುವ ಪಕ್ಷ ವರ್ಷಕ್ಕೆ 2 ಕೋಟಿ ಉದ್ಯೋಗ ಕೊಡುವ ಭರವಸೆ ಸುಳ್ಳಾಗಿದೆ. ಇಂದು ಭಾರತದ ಯುವಕರು ನಿರುದ್ಯೋಗದ ಕಷ್ಟ ತಡೆಯಲಾಗದೆ ಯುದ್ಧ ಪೀಡಿತರಷ್ಯಾ,ಇಸ್ರೇಲ್,ಮೊದಲಾದರಾಷ್ಟ್ರಗಳಿಗೆ ಕೆಲಸ ಹುಡುಕಿಕೊಂಡು ಹೋಗುತ್ತಿದ್ದಾರೆ. ಇನ್ನೊಂದೆಡೆ ಜಾಗತಿಕ ಹಸಿವಿನ ಸೂಚ್ಯಂಕ, ಮಾನವ ಅಭಿವೃದ್ಧಿ ಸೂಚ್ಯಂಕಗಳಲ್ಲಿ ಭಾರತದ ಸ್ಥಾನಪಾತಾಳದಲ್ಲಿದೆಎಂದುಆರೋಪಿಸಿದರು. ರಾಜ್ಯದಲ್ಲಿ ಭೀಕರ ಬರ ಬಂದಿದ್ದು, ನೀರಿಗಾಗಿ ಹಾಹಾಕಾರ ಇದ್ದರೂ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳೆರಡೂ ಕ್ಷುಲ್ಲಕ ರಾಜಕೀಯದಲ್ಲಿ ಮುಳುಗಿವೆಯೇಹೊರತು,ಜನರಸಂಕಷ್ಟಗಳಿಗೆ ಗಮನ ಹಾಕುತ್ತಿಲ್ಲ. ಇಲ್ಲಿ ಜನಸಮುದಾಯ ಹಾಗೂ ರೈತ – ಕೃಷಿ– ಕಾರ್ಮಿಕರಿಗೆ ಅವಶ್ಯಕತೆ ಇರುವುದು ಉದ್ಯೋಗ,ಶಿಕ್ಷಣ,ವಸತಿಗಳಂತಹ ಸೌಲಭ್ಯಗಳು. ಇಂತಹ ಜನರ ಜ್ವಲಂತ ಸಮಸ್ಯೆಗಳ ವಿರುದ್ಧ ಲೋಕಸಭೆಯಲ್ಲಿ ಧ್ವನಿ ಎತ್ತಲು ಬೆಂಬಲಿಸುವಂತೆ ಮನವಿ ಮಾಡಿದರು.

ನಾಮಪತ್ರ ಸಲ್ಲಿಸುವಾಗ ಜಿಲ್ಲಾ ಕಾರ್ಯದರ್ಶಿ ಬಿ. ಭಗವಾನರೆಡ್ಡಿ , ಮುಖಂಡರಾದ ವಿ. ಎ. ಪಾಟೀಲ, ಸಂಗಾರೆಡ್ಡಿ ದೇಸಾಯಿ, ಪಕ್ಷದ ಜಿಲ್ಲಾ ಸಮಿತಿಯ ಸದಸ್ಯರಾದ ಸಿದ್ದಲಿಂಗ ಬಾಗೇವಾಡಿ ಇದ್ದರು

# ಸದೃಢ ದೇಶದ ನಿರ್ಮಾಣಕ್ಕೆ ಯುವಶಕ್ತಿಯ ಕೊಡುಗೆ ಅನನ್ಯ: ಸಿಇಓ ರಿಶಿ ಆನಂದ



ವಿಜಯಪುರ, : ಒಂದು ದೇಶದ ಶಕ್ತಿಶಾಲಿ ಸಂಪನ್ಮೂಲ ಎಂದರೆ ಅದು ಯವಶಕ್ತಿ. ದೇಶಕ್ಕೆ ಯುವಕರ ಕೊಡುಗೆ ಅತ್ಯಂತ ಮಹತ್ವದಾಗಿದೆ. ದೇಶದ ಭವಿಷ್ಯ ನಿರ್ಮಾಣ ಕಾರ್ಯಕ್ಕೆ ಎಲ್ಲಾ ಯುವಕರು ಲೋಕಸಭಾ ಚುನಾವಣೆಯಲ್ಲಿ ಪಾರದರ್ಶಕ ಹಾಗೂ ಮುಕ್ತವಾಗಿ ಮತದಾನ ಮಾಡುವ ಮೂಲಕ ಸದೃಢ ದೇಶ ನಿರ್ಮಾಣ–ಕ್ಕೆ ಕಾರಣೀಭೂತರಾಗಬೇಕು ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ರಿಶಿ ಆನಂದ ಹೇಳಿದರು.

ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾ ಪಂಚಾಯತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಸಹಯೋಗದಲ್ಲಿ ನಗರದ ಡಾ. ಬಿ. ಆರ್ ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಸೋಮವಾರ ಕ್ರೀಡಾ ಇಲಾಖೆಯ ಯುವ ಕ್ರೀಡಾಪಟುಗಳೊಂದಿಗೆ ನಡೆದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಆಟವನ್ನು ಗೆಲ್ಲಬೇಕಾದರೆ ಹೇಗೆ ಸತತ ಪರಿಶ್ರಮ ಪಡುತ್ತೇವೆಯೋ ಹಾಗೆ ಸ್ವಚ್ಛ ಹಾಗೂ ನ್ಯಾಯಸಮ್ಮತ ಆಡಳಿತ ನಿರ್ಮಾಣವಾಗಲು ಯೋಗ್ಯ ಅಭ್ಯರ್ಥಿಗಳ ಆಯ್ಕೆ ಮಾಡುವಲ್ಲಿ ಯುವಶಕ್ತಿ ಮುಂದಾಗಬೇಕು. ಅದಲ್ಲದೇ ತಮ್ಮ ಕುಟುಂಬ, ನೆರೆಹೊರೆಯವರಿಗೆ ಮತದಾನದ ಮಹತ್ವ ತಿಳಿಸಿ ಕಡ್ಡಾಯ ಮತದಾನ ಮಾಡುವಂತೆ ಪ್ರೋತ್ಸಾಹಿಸಬೇಕು ಎಂದರು.

ಮತದಾನ ಮಾಡುವ ಮೂಲಕ ನಿಮ್ಮದೇ ಆದ ಕೊಡುಗೆಯನ್ನು ನೀಡಬೇಕು. ಮೊಟ್ಟಮೊದಲ ಬಾರಿಗೆ ಮತದಾನ ಮಾಡುತ್ತಿರುವ ನೀವು ಯಾವುದೇ ಭಯವಿಲ್ಲದೆ, ನಿರ್ಭೀತರಾಗಿ ಮತದಾನ ಮಾಡಿ. ನೀವ??ಟೀ ಅಲ್ಲದೆ ಮೊದಲ ಬಾರಿಗೆ ಮತದಾನ ಮಾಡುತ್ತಿರುವ ನಿಮ್ಮ ಸ್ನೇಹಿತ–ರಿಗೂ ಕೂಡ ಚುನಾವಣೆ ದಿನದಂದು ಮತದಾನ ಮಾಡಲು ಪ್ರೇರೇಪಣೆ ನೀಡಬೇಕು. ಎಲ್ಲ ಮತದಾರ–ರಿಗೆ ನೀವು ಮಾದರಿಯಾಗಬೇಕು ಎಂದು ಕಿವಿಮಾತು ಹೇಳಿದರು.

ರನ್ನಿಂಗ್ ಮಾಡಿ ಮತದಾನ ಜಾಗೃತಿ ಮೂಡಿಸಿದ ಜಿಪಂ ಸಿಇಒ ನಂತರ ಸಿಇಒ ರಿಶಿ ಆನಂದ ಅವರು, ಎಲ್ಲ ಕ್ರೀಡಾಪಟುಗಳೊಂದಿಗೆ ಕ್ರೀಡಾಂಗಣದಲ್ಲಿ 800 ಮೀಟ–ರ್ ರನ್ನಿಂಗ್ ಮಾಡುವ ಮೂಲಕ ಎಲ್ಲಾ ಕ್ರೀಡಾಪಟುಗಳಿಗೆ ಮಾದರಿಯಾದರು. ಕ್ರೀಡಾಪಟುಗಳ ಆತ್ಮಸ್ಥೈರ್ಯವನ್ನು ಹೆಚ್ಚಿಸಿದರು. ಈ ಸಂದರ್ಭದಲ್ಲಿ ಎಲ್ಲ ಕ್ರೀಡಾಪಟುಗಳು ಅತ್ಯಂತ ಉತ್ಸಾಹ ಮತ್ತು ಆಸಕ್ತಿಯಿಂದ ಸಿಇಒ ಅವರೊಂದಿಗೆ ಬೆರೆತು ರನ್ನಿಂಗ್‌ನಲ್ಲಿ ಭಾಗವಹಿಸಿದರು. ಇದೇ ರೀತಿ ಎಲ್ಲರೂ ಅತ್ಯಂತ ಉತ್ಸಾಹದಿಂದ ಹಾಗೂ ಸಂತಸದಿಂದ ಮತದಾನದ ದಿನದಂದು ತಪ್ಪದೆ ಕಡ್ಡಾಯವಾಗಿ ಮತದಾನ ಮಾಡಬೇಕೆಂದು ಕ್ರೀಡಾಪಟುಗಳನ್ನು ಹುರಿದುಂಬಿಸಿದರು.

ಬಳಿಕ ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿ ಸಿ. ಆರ್. ಮುಂಡರಗಿ ಅವರು ಮಾತನಾಡಿ, ಪ್ರಪಂಚದಲ್ಲೇ ಅತ್ಯಂತ ಸದೃಢ ಪ್ರಜಾಪ್ರಭುತ್ವ ವ್ಯವಸ್ಥೆ ಹೊಂದಿದ ಭಾರತ. ಉತ್ತಮ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಹೊಂದಿದ ದೇಶ ಎಂದು ಪ್ರಪಂಚವೇ ನಮ್ಮತ್ತ ಕೈ ಬೀಸಿ ಹೇಳುತ್ತದೆ. ಅದಕ್ಕಾಗಿ ನಮ್ಮ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಕಾಪಾಡುವುದು ಮತ್ತು ಅಭಿವೃದ್ಧಿಪಡಿಸುವುದು ನಮ್ಮೆಲ್ಲರ ಜವಾಬ್ದಾ–ರಿಯಾಗಿದೆ. ಮುಂಬರುವ ಲೋಕಸಭಾ ಚುನಾವಣೆ 2024ರಂದು ಕಡ್ಡಾಯವಾಗಿ ಮತ್ತು ಖಚಿತವಾಗಿ ಮತದಾನ ಮಾಡುವ ಮೂಲಕ ನಮ್ಮ ಜವಾಬ್ದಾರಿಯನ್ನು ನಿರ್ವಹಿಸೋಣ ಎಂದರು.

ಈ ಜಿಲ್ಲಾ ಸ್ವೀಪ್ ಸಮಿತಿಯ ರಾಯಭಾರಿ ರಾಜೇಶ ಪವಾರ ಮತದಾರರಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು. ಸಾಕ್ಷಿ ಹಿರೇಮಠ ಅವರು ಮತದಾನದ ಜಾಗೃತಿ ಕುರಿತ ಗೀತೆಗಳನ್ನು ಹಾಡುವ ಮೂಲಕ ಎಲ್ಲ ಕ್ರೀಡಾಪಟುಗಳಲ್ಲಿ ಮತದಾನದ ಕುರಿತು ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿ ಬಿ.ಎಸ್. ಮೂಗನೂರಮಠ, ವಿಜಯಪುರ ತಾಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ಕೆ. ಹೊಂಗಯ್ಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಎಸ್. ಜಿ. ಲೋಣಿ, ಜಿಲ್ಲಾ ಎನ್.ಎಸ್.ಎಸ್ ಘಟಕದ ನೊಡೆಲ್ ಅಧಿಕಾರಿ ಪ್ರಕಾಶ ರಾಠೋಡ, ಜಿಲ್ಲಾ ಸ್ವೀಪ್ ಸಮಿತಿಯ ರಾಯಭಾರಿ ಸಹನಾ ಕುಡಿಗನೂರ, ಜಿಲ್ಲೆಯ ಅಥ್ಲೆಟಿಕ್ ಕ್ರೀಡಾಕೂಟಗಳ ಕೋಚ್‌ಗಳು, ಜಿಲ್ಲಾ ಪಂಚಾಯತಿಯ ಅಧಿಕಾರಿ ಮತು ಸಿಬ್ಬಂದಿಯವರು, ಕ್ರೀಡಾ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

## ಬಿಇಡ್: ಜೆಎಸ್ಎಸ್ ಕಾಲೇಜು ಶೇ.100ರಷ್ಟು ಸಾಧನೆ




**ರಬಕವಿ–ಬನಹಟ್ಟಿ** : ಇಲ್ಲಿನ ಜನತಾ ಶಿಕ್ಷಣ ಸಂಸ್ಥೆಯ ಬಿಎಡ್ ಪರೀಕ್ಷೆಯಲ್ಲಿ ಶೇ.100 ರಷ್ಟು ವಿದ್ಯಾರ್ಥಿಗಳು ತೇರ್ಗಡೆ ಹೊಂದುವ ಮೂಲಕ ಸಾಧನೆ ಮೆರೆದಿದ್ದಾರೆ.

ಶಂಕ್ರೆವ್ವ ಮೇತ್ರಿ ಶೇ.89 ಅಂಕ ಪಡೆದು ಪ್ರಥ–ಮ ಸ್ಥಾನ ಪಡೆದಿದ್ದಾರೆ. ಸತ್ಯವ್ವ ಮೇತ್ರಿ ಶೇ. 88.90ದೊಂದಿಗೆ ದ್ವಿತೀಯ, ಅನಿತಾ ಅಥ–ಣಿ ಶೇ.88 ರಷ್ಟು ಅಂಕ ಪಡೆದು ತೃತಿಯ ಸ್ಥಾನ ಪಡೆದಿದ್ದಾರೆ.

ಅದರಂತೆ ಪೂಜಾ ಕೊಣ್ಣೂರ್ ಶೇ.87.90, ಐಶ್ವರ್ಯಾ ಅಥಣಿ ಶೇ.87.40, ಸೀಮಾ ಪೂಜಾರಿ ಶೇ.87.10, ರೂಪಾ ಕಾರಜೋಳ ಶೇ.86.90, ಸಹನಾ ಜಯನ್ನವರ ಶೇ.86.80, ಆಶಾ ಕೋಳಿಗುಡ್ಡ ಶೇ.86.10, ಆಯೇಶಾ ಖಾಜಿ ಶೇ.85.80 ರಷ್ಟು ಅಂಕ ಪಡೆದು ಸಾಧನೆ ಮಾಡಿದ್ದಾರೆ. ಒಟ್ಟು 92 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಎಲ್ಲರೂ ತೇರ್ಗಡೆ ಹೊಂದಿದ್ದಾರೆ. ಉನ್ನತ ದರ್ಜೆಯಲ್ಲಿ 88 ವಿದ್ಯಾರ್ಥಿಗಳು ಹಾಗು ಪ್ರಥಮ ದರ್ಜೆಯಲ್ಲಿ 4 ವಿದ್ಯಾರ್ಥಿಗಳು ತೇರ್ಗಡೆ ಹೊಂದಿದ್ದಾರೆ.

## ಪಿಯು: ಪದ್ಮಾವತಿ ಕಾಲೇಜು ಶೇ. 99 ರಷ್ಟು ಸಾಧನೆ

**ರಬಕವಿ–ಬನಹಟ್ಟಿ** : ತಾಲೂಕಿನ ಹಜಾರೆ ಫೌಂಡೇಶನ್ನ ಪದ್ಮಾವತಿ ವಿಜ್ಞಾನ ಮತ್ತು ವಾಣಿಜ್ಯ ಪದವಿ ಪೂರ್ವ ಮಹಾವಿದ್ಯಾಲಯದ ವಿಜ್ಞಾನ ವಿಭಾಗದಲ್ಲಿ ಕು. ವಿಷ್ಣು ಮೋರೆ 578 ಅಂಕಗಳನ್ನು ಪಡೆದು ಪ್ರಥಮ ಸ್ಥಾನ, ಕು. ರಾಘವೇಂದ್ರ ಹೂಗಾರ 576 ಅಂಕಗಳನ್ನು ಪಡೆದು ದ್ವಿತೀಯ ಸ್ಥಾನ ಹಾಗೂ ಕು. ರುತುಜಾ ಕದ್ದು 575 ಅಂಕಗಳನ್ನು ಪಡೆದು ತೃತೀಯ ಸ್ಥಾನ ಪಡೆದಿರುತ್ತಾರೆ. ಒಟ್ಟಾರೆ 247 ವಿದ್ಯಾರ್ಥಿಗಳಲ್ಲಿ 81 ವಿದ್ಯಾರ್ಥಿಗಳು ಉನ್ನತ ಶ್ರೇಣಿಯಲ್ಲಿ, 135 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿ ಶೇ. 99% ರಷ್ಟು ಫಲಿತಾಂಶ ಗಳಿಸಿರುತ್ತಾರೆ.

ಗಣಿತ ವಿಷಯದಲ್ಲಿ ಆರು ಜನ ವಿದ್ಯಾರ್ಥಿಗಳು, ಜೀವಶಾಸ್ತ್ರ ವಿಷಯದಲ್ಲಿ ನಾಲ್ಕು ಜನ ವಿದ್ಯಾರ್ಥಿಗಳು, ಕನ್ನಡ ವಿಷಯದಲ್ಲಿ ಮೂರು ಜನ ವಿದ್ಯಾರ್ಥಿಗಳು ನೂರಕ್ಕೆ ನೂರು ಅಂಕ ಗಳಿಸಿರುತ್ತಾರೆ.



ಅದೇ ರೀತಿ ವಾಣಿಜ್ಯ ವಿಭಾಗದಲ್ಲಿ ಕು. ಅಲಸಫಾ ಮುಲ್ಲಾ 576 ಅಂಕಗಳನ್ನು ಪಡೆದು ಪ್ರಥಮ ಸ್ಥಾನ, ಕು. ರೋಹಿತ ಕೇದಾರಿ 574 ಅಂಕಗಳನ್ನು ಪಡೆದು ದ್ವಿತೀಯ ಸ್ಥಾನ ಹಾಗೂ ಕು. ಪ್ರೇರಣಾ ಓಸ್ವಾಲ 573 ಅಂಕಗಳನ್ನು ಪಡೆದು ತೃತೀಯ ಸ್ಥಾನ ಪಡೆದಿರುತ್ತಾರೆ.

ಒಟ್ಟಾರೆ 60 ವಿದ್ಯಾರ್ಥಿಗಳಲ್ಲಿ 20 ವಿದ್ಯಾರ್ಥಿಗಳು ಉನ್ನತ ಶ್ರೇಣಿಯಲ್ಲಿ , 32 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿ, ಶೇ. ನೂರಕ್ಕೆ ನೂರರಷ್ಟು ಫಲಿತಾಂಶ ಗಳಿಸಿರುತ್ತಾರೆ. ಲೆಕ್ಕಶಾಸ್ತ್ರ ವಿಷಯದಲ್ಲಿ ನಾಲ್ಕು ಜನ ವಿದ್ಯಾರ್ಥಿಗಳು, ಅಥ–ರ್ಶಾಸ್ತ್ರ ವಿಷಯದಲ್ಲಿ ಒಬ್ಬ ವಿದ್ಯಾರ್ಥಿ ನೂರಕ್ಕೆ ನೂರು ಅಂಕಗಳನ್ನು ಪಡೆದಿರುತ್ತಾರೆ.

ಇವರ ಸಾಧನೆಗೆ ಸಂಸ್ಥೆಯ ಚೇರಮನ್ನರಾದ ಸತೀಶ ಹಜಾರೆ, ಅಧ್ಯಕ್ಷೆಯಾದ ಪದ್ಮಾವತಿ ಹಜಾರೆ, ಆಡಳಿತಾಧಿಕಾರಿ ಭಾರತಿ ತಾಳಿಕೋಟಿ ಹರ್ಷ ವ್ಯಕ್ತಪಡಿಸಿದ್ದಾರೆ.

## ರಾಜ್ಯ ಸರ್ಕಾರದ ಬೊಕ್ಕಸದಿಂದ ರೈತರಿಗೆ ಬರದ ಹಣ ಬಿಡುಗಡೆಯಾಗಲಿ

ಹುಬ್ಬಳ್ಳಿ : ಸದ್ಯ ರಾಜ್ಯ ಸರ್ಕಾರ ತನ್ನ ಬೊಕ್ಕಸದಿಂದ ರೈತರಿಗೆ ಬರ ಪರಿಹಾರದ ಹಣ ಬಿಡುಗಡೆ ಮಾಡಲಿ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ನಗರದಲ್ಲಿಂದು ಸುದ್ದಿಗಾರ ರೊಂದಿಗೆ ಮಾತನಾಡಿದ ಅವರು, ಬರಪ–ರಿಹಾರದ ಹಣ ಬಿಡುಗಡೆ ಕೋರಿ ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್‌ಗೆ ಹೋಗಿರುವುದು ರಾಜಕೀಯ ಪ್ರೇರಿತ ಎಂದು ನುಡಿದರು.

ರಾಜ್ಯದ ನೈಜ ಸ್ಥಿತಿಯನ್ನು ಈಗಿನ ಸರ್ಕಾರ ಹೇಳಿಕೊಳ್ಳಲಿಲ್ಲ. ಆದ್ದರಿಂದಲೇ ಈ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ರಾಜ್ಯ ಸರ್ಕಾರದತ್ತಲೇ ಬೆರಳು ತೋರಿಸಿದ ಅವರು, ಯು.ಪಿ.ಎ ಸರ್ಕಾರ ವಿದ್ದಾಗ 8–10 ತಿಂಗಳ ನಂತರ ಪರಿಹಾರದ ಹಣ ಬಿಡುಗಡೆಯಾಗಿದೆ ಸದ್ಯ ರೈತರಿಗೆ ರಾಜ್ಯಸರ್ಕಾರತನ್ನಬೊಕ್ಕಸದಿಂದ ಹಣ ಬಿಡುಗಡೆ ಮಾಡಲಿ ಎಂದು ಹೇಳಿದರು.

ರೈತರ ಕುರಿತು ಕಾಳಜಿ ಇಲ್ಲದ ರೈತ ವಿರೋಧಿ ಸರ್ಕಾರವಿದು ಎಂದು ಅವರು ಕುಟುಕಿದರು.

ಕಾಂಗ್ರೆಸ್‌ನ 25 ಗ್ಯಾರಂಟಿಗಳ ಘೋಷಣೆ ವಿಷಯ ಕುರಿತಂತೆ ಪ್ರತಿಕ್ರಿಯಿಸುತ್ತ, ಕಾಂಗ್ರೆಸ್ ಹೆಚ್ಚಿನ ಸ್ಥಾನಗಳಲ್ಲಿ ಸ್ಪರ್ಧೆ ಮಾಡದೇ ಅಧಿಕಾರಕ್ಕೆ ಹೇಗೆ ಬರುತ್ತದೆ? ಎಂದು ಪ್ರಶ್ನಿಸಿದ ಅವರು, ಮೊದಲು ಕಾಂಗ್ರೆಸ್ 543 ಸ್ಥಾನಗಳಲ್ಲಿ ಸ್ಪರ್ಧಿಸಲಿ ನಂತರ ಇಂಥ ಆಶ್ವಾಸನೆಗಳನ್ನು ಕೊಡಲಿ ಎಂದು ಟಾಂಗ್ ನೀಡಿದರು,

ಜನರಿಗೆ ಅಪ್ಪಟ ಸುಳ್ಳುಗಳನ್ನು ಹೇಳುತ್ತ ಒಂದಿಷ್ಟು ಸ್ಥಾನಗಳಿಗಾಗಿ ಕಾಂಗ್ರೆಸ್‌ನವರು ಈ ರೀತಿ ಮಾಡುತ್ತಿದ್ದಾರೆ ಎಂದು ಅವರು ಟೀಕಿಸಿದರು.

"SIHI KAHI" Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State